Volume : 9 | Issue : 198 | October : 27 : 2026 : Tuesday
ಸಂಪುಟ : 9 | ಸಂಚಿಕೆ : 198 | ಅಕ್ಟೋಬರ್ : 27 : 2026 : ಮಂಗಳವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI
PRGI NO: KARKAN/2018/78481



ಕೊಯಮತ್ತೂರಿನಲ್ಲ ಮೊಬೈಲ್ ಶೋರೂಮ್ ಉದ್ಘಾಟನೆಗೆ ಆಗಮಿಸಿದ ನಟಿ ತ್ರಿಷಾ ಕೃಷ್ಣನ್ ಅವರನ್ನು ನೋಡಲು ಅಭಿಮಾನಿಗಳು ಮುಗಿಬಿದ್ದರು. ಅವರ ರಾಜಕೀಯ ಪ್ರವೇಶದ ವದಂತಿಗಳ ನಡುವೆಯೇ ಈ ಜನಸ್ತೋಮ ತಮಿಳುನಾಡಿನಲ್ಲ ಹೊಸ ರಾಜಕೀಯ ಚರ್ಚೆಗೆ ಕಾರಣವಾಗಿದೆ.

ಮಧ್ವ ಜಯಂತಿ ಸಂಭ್ರಮ: ಸಾಧಕರಿಗೆ 'ಮಧ್ವ ವಿಜಯ' ಹಾಗೂ 'ಹನುಮ ಮಧ್ವೇಶ' ಪ್ರಶಸ್ತಿ ಪ್ರದಾನ ಪುಟ 4

ಮೀಸಲಾತಿ ಹೆಚ್ಚಳ: ಸುಪ್ರೀಂ ಕೋರ್ಟ್‌ನಲ್ಲ ರಾಜ್ಯದ ಪರ ವಾದ ಪುಟ 3



# ಕಬ್ಬಿನ ದರಕ್ಕೆ ರೈತ ಮುಖಂಡರ ಕಿತ್ತಾಟ!

## ಸುವರ್ಣಸೌಧದಲ್ಲಿ ರೈತರ ಬಣಗಳ ಹೊಡೆದಾಟ; ಇಬ್ಬರಿಗೆ ಗಾಯ

● ವಿಕ್ರಮ ವಾಹಿನಿ । ಬೆಳಗಾವಿ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಕಬ್ಬು ಬೆಳೆಗಾರರ ಸಭೆ ನಡೆಯುವ ಮುನ್ನವೇ ರೈತ ಮುಖಂಡರ ಎರಡು ಬಣಗಳ ನಡುವೆ ವಾಗ್ವಾದ ವಿಕೋಪಕ್ಕೆ ತಿರುಗಿ, ಪರಸ್ಪರ ಹೊಡೆದಾಟ ನಡೆದ ಘಟನೆ ಸೋಮವಾರ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದಿದೆ. ಗಲಾಟೆಯಲ್ಲಿ ಗಾಜಿನ ತುಂಡು ತಗುಲಿ ಇಬ್ಬರು ಗಾಯಗೊಂಡಿದ್ದು, ಪೊಲೀಸರು ಮಧ್ಯಪ್ರವೇಶಿಸಿ ಪರಿಸ್ಥಿತಿ ನಿಯಂತ್ರಣಕ್ಕೆ ತಂದರು.

ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಅಧ್ಯಕ್ಷ ಚೂನಪ್ಪ ಪೂಜಾರಿ ಬಣ ಹಾಗೂ ಕೋಡಿಹಳ್ಳಿ ಚಂದ್ರಶೇಖರ ಬಣದ ಕಾರ್ಯಕರ್ತರ ನಡುವೆ ಕಬ್ಬಿನ ಬೆಲೆ ನಿಗದಿ ವಿಚಾರವಾಗಿ ಸಂಘರ್ಷ ನಡೆದಿದೆ. ಸಕ್ಕರೆ ಕಾರ್ಖಾನೆಗಳ ಮಾಲೀಕರು ಮತ್ತು ಕಬ್ಬು ಬೆಳೆಗಾರರೊಂದಿಗೆ ಮುಖ್ಯಮಂತ್ರಿ ಪ್ರತ್ಯೇಕ ಸಭೆ ನಡೆಸಿದ್ದರು. ಕಾರ್ಖಾನೆ ಮಾಲೀಕರೊಂದಿಗಿನ ಸಭೆ ಮುಗಿಸಿ ಮುಖ್ಯಮಂತ್ರಿ ಯಲ್ಲಮ್ಮನಗುಡ್ಡಕ್ಕೆ ತೆರಳಿದ ಬಳಿಕ, ಸಂಜೆ ಸುಮಾರು 4 ಗಂಟೆಗೆ ರೈತ ಮುಖಂಡರು ಸಭಾಂಗಣಕ್ಕೆ ಆಗಮಿಸಿದ್ದರು.

ಸಭೆ ಆರಂಭಕ್ಕೂ ಮುನ್ನ ರೈತರ ಬೇಡಿಕೆಗಳ ಕುರಿತು ಚರ್ಚೆ ನಡೆಯುತ್ತಿದ್ದಾಗ ಚೂನಪ್ಪ ಪೂಜಾರಿ, ಹೋರಾಟದ ಫಲವಾಗಿ ಸಭೆ ಕರೆಯಲಾಗಿದ್ದು, ಕಾರ್ಖಾನೆಗಳಿಂದ ಪ್ರತಿ ಟನ್ ಕಬ್ಬಿಗೆ ರೂ 4,500 ದರ ನಿಗದಿಪಡಿಸುವಂತೆ ಒತ್ತಾಯಿಸಲಾಗುವುದು ಎಂದು ಹೇಳಿದರು. ಇದಕ್ಕೆ ಕೋಡಿಹಳ್ಳಿ ಚಂದ್ರಶೇಖರ ಬಣದ ಮುಖಂಡರು ಆಕ್ಷೇಪ ವ್ಯಕ್ತಪಡಿಸಿ, ಈ ಹಿಂದೆ ಟನ್‌ಗೆ ರೂ 5,500 ದರಕ್ಕಾಗಿ ಹೋರಾಟ ನಡೆಸಿದ್ದರೂ ಈಗ ರೂ 4,500 ದರದ ಪ್ರಸ್ತಾಪ ಮಾಡುತ್ತಿರುವುದೇಕೆ ಎಂದು ಪ್ರಶ್ನಿಸಿದರು. ವೇದಿಕೆಯಿಂದ ಕೆಳಗಿಳಿಯುವಂತೆಯೂ ಆಗ್ರಹಿಸಿದರು. 2ನೇ ಪುಟಕ್ಕೆ...



ಸಿಎಂ ಡಿ ಕೆ ಶಿವಕುಮಾರ್ ಅವರು ಕಬ್ಬು ಬೆಳೆಗಾರರ ಬೇಡಿಕೆ ವಿಚಾರವಾಗಿ ಬೆಳಗಾವಿಯ ಸುವರ್ಣಸೌಧದಲ್ಲ ಸಕ್ಕರೆ ಕಾರ್ಖಾನೆ ಮಾಲೀಕರ ಜೊತೆ ಸೋಮವಾರ ಸಭೆ ನಡೆಸಿದರು. ಸಚಿವ ಸತೀಶ್ ಜಾರಕಿಹೊಳಿ, ಲಕ್ಷ್ಮಣ್ ಸವದಿ, ಚಲುವರಾಯಸ್ವಾಮಿ, ಎಂ ಬಿ ಪಾಟೀಲ್, ಸಂತೋಷ್ ಲಾಡ್, ರುದ್ರಪ್ಪ ಲಮಾಣಿ, ಎಸ್ ಎಸ್ ಮಲ್ಲಿಕಾರ್ಜುನ್, ವಿಜಯಾನಂದ್ ಕಾಶಪ್ಪನವರ್, ಸಂಸದೆ ಪ್ರಿಯಾಂಕ ಜಾರಕಿಹೊಳಿ, ಸಿಎಂ ಆರ್ಥಿಕ ಸಲಹೆಗಾರ ಎಲ್ ಕೆ ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ತುಷಾರ್ ಗಿರಿನಾಥ್, ಗೌರವ್ ಗುಪ್ತಾ, ರಿತೇಶ್ ಕುಮಾರ್ ಸಿಂಗ್, ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಕಬ್ಬು ಬೆಳೆಯುವ ಜಿಲ್ಲೆಗಳ ಜನಪ್ರತಿನಿಧಿಗಳು, ಕಾರ್ಖಾನೆಗಳ ಮಾಲೀಕರು, ಸರ್ಕಾರದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಬ್ಬು ಬೆಳೆಗಾರರ ಸಮಸ್ಯೆ: ಕೇಂದ್ರದ ಹೊಣೆ ಹೆಚ್ಚು

● ವಿಕ್ರಮ ವಾಹಿನಿ । ಬೆಳಗಾವಿ

ಕಬ್ಬು ಬೆಳೆಗಾರರ ಬೇಡಿಕೆಗಳ ಈಡೇರಿಕೆಯಲ್ಲಿ ರಾಜ್ಯ ಸರ್ಕಾರಕ್ಕಿಂತ ಕೇಂದ್ರ ಸರ್ಕಾರದ ಹೊಣೆಗಾರಿಕೆ ಹೆಚ್ಚಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಬೆಳಗಾವಿಯಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸುತ್ತಿದ್ದ ಸಂದರ್ಭದಲ್ಲಿ ಕಿತ್ತೂರಿನಲ್ಲಿ ಅವರೊಂದಿಗೆ ಚರ್ಚಿಸಿ ಅಹವಾಲು ಆಲಿಸಿದ್ದೇನೆ.

ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಸೋಮವಾರ ಮೊದಲು ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ, ಬಳಿಕ ರೈತರು ಹಾಗೂ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಲಾಗುವುದು ಎಂದರು.

ಬೆಳಿಗ್ಗೆ ಹಲವು ಶಾಸಕರು ತಮ್ಮನ್ನು ಭೇಟಿಯಾಗಿ ಕ್ಷೇತ್ರಗಳಲ್ಲಿ ಎದುರಿಸುತ್ತಿರುವ ಒತ್ತಡಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಸಭೆಯಲ್ಲಿ ತಮ್ಮ ಅಭಿಪ್ರಾಯಗಳನ್ನು ಮುಕ್ತವಾಗಿ ಮಂಡಿಸುವಂತೆ ಅವರಿಗೆ ಸೂಚಿಸಿದ್ದೇನೆ. ಶಾಸಕರು ಜನರ ಪ್ರತಿನಿಧಿಗಳಾಗಿದ್ದು, ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಜವಾಬ್ದಾರಿ ಅವರ ಮೇಲಿದೆ ಎಂದು ತಿಳಿಸಿದರು. 2ನೇ ಪುಟಕ್ಕೆ...

## ರೈತರ ಮುಂದಿನ ನಡೆ ಏನು?

● ವಿಕ್ರಮ ವಾಹಿನಿ । ಬೆಳಗಾವಿ

ಕಬ್ಬು ಬೆಳೆಗಾರರ ಬೇಡಿಕೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸೋಮವಾರ ನಡೆದ ಸಭೆ ಯಾವುದೇ ಸ್ಪಷ್ಟ ತೀರ್ಮಾನವಿಲ್ಲದೆ ಅಂತ್ಯಗೊಂಡಿದೆ. 2ನೇ ಪುಟಕ್ಕೆ...

## 'ಪ್ಯಾರಿಸ್ ಮುಸ್ಲಿಂ ನಗರವಾಗಲಿದೆ': ಟ್ರಂಪ್

● ವಿಕ್ರಮ ವಾಹಿನಿ । ನವದೆಹಲಿ

ಫ್ರಾನ್ಸ್‌ನಲ್ಲಿನ ಅಶಾಂತಿಗೆ ವಲಸಿಗರ ನೀತಿಯೇ ಕಾರಣ ಎಂದು ಆರೋಪಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಪ್ಯಾರಿಸ್ ಶೀಘ್ರದಲ್ಲೇ ಮುಸ್ಲಿಂ ನಗರವಾಗಲಿದೆ ಎಂದು ಹೇಳಿಕೆ ನೀಡಿದ್ದಾರೆ. ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್ ಅವರಿಗೆ ಗಡಿಗಳನ್ನು ಮುಚ್ಚುವಂತೆ ಈ ಹಿಂದೆಯೇ ಸಲಹೆ ನೀಡಿದ್ದೆ ಎಂದು ಅವರು ಹೇಳಿದ್ದಾರೆ.

ವಾಷಿಂಗ್ಟನ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಟ್ರಂಪ್, "ಇಮ್ಯಾನುಯೆಲ್ ನನ್ನ ಸ್ನೇಹಿತ. ಜಗತ್ತಿನ ಎಲ್ಲರನ್ನೂ ದೇಶದೊಳಗೆ ಪ್ರವೇಶಿಸಲು ಅವಕಾಶ ನೀಡುವ ಬಗ್ಗೆ ಎಚ್ಚರಿಸಿದ್ದೆ. ಪ್ಯಾರಿಸ್‌ಗೆ ವಿಶ್ವದ ಎಲ್ಲೆಡೆಯಿಂದ ಜನರು ಬರುತ್ತಿದ್ದಾರೆ. ಶೀಘ್ರದಲ್ಲೇ ಅದು ಮುಸ್ಲಿಂ ನಗರವಾಗಲಿದೆ ಎಂದು ತಿಳಿಸಿದ್ದೆ. ನಾವು ನಮ್ಮ ಗಡಿಗಳನ್ನು ಮುಚ್ಚಿದ್ದೇವೆ. ಆದರೆ, ಫ್ರಾನ್ಸ್ ಹಾಗೆ ಮಾಡಲಿಲ್ಲ" ಎಂದು ಹೇಳಿದ್ದಾರೆ.

ಯುರೋಪ್‌ನ ಸರ್ಕಾರಗಳು ತಮ್ಮ ಗಡಿಗಳನ್ನು ರಕ್ಷಿಸುವಲ್ಲಿ ವಿಫಲವಾಗಿವೆ. ವಲಸಿಗರಿಗೆ ಸಂಬಂಧಿಸಿದ ನೀತಿಗಳ ಪರಿಣಾಮವನ್ನು ಈಗ ಎದುರಿಸುತ್ತಿವೆ ಎಂದು ಟ್ರಂಪ್ ಟೀಕಿಸಿದ್ದಾರೆ. ಪ್ಯಾರಿಸ್‌ನಲ್ಲಿನ ಅಶಾಂತಿಯ ಹಿನ್ನೆಲೆಯಲ್ಲಿ ಕರ್ಫ್ಯೂ ಘೋಷಿಸಲಾಗಿದೆ ಎಂದು ವರದಿಯಾಗಿದೆ.

ಆದರೆ, ಫ್ರಾನ್ಸ್‌ನಲ್ಲಿನ ಪ್ರತಿಭಟನೆಗಳಿಗೆ ವಲಸಿಗರೇ ಕಾರಣ ಎಂಬ ಟ್ರಂಪ್ ಆರೋಪಕ್ಕೆ ದೃಢವಾದ ಆಧಾರವಿಲ್ಲ. ಪ್ರತಿಭಟನೆಗಳ ಹಿಂದಿನ ಕಾರಣಗಳ ಕುರಿತು ವರದಿಗಳಲ್ಲಿ ಬೆಲೆ ಏರಿಕೆ, ಸಾಮಾಜಿಕ ಅಸಮಾನತೆ, ಸಾರ್ವಜನಿಕ ಸೇವೆಗಳ ಕುಸಿತ ಮತ್ತು ಸರ್ಕಾರದ ನೀತಿಗಳ ವಿರುದ್ಧದ ಅಸಮಾಧಾನವನ್ನು ಉಲ್ಲೇಖಿಸಲಾಗಿದೆ.



ಪ್ರತಿಭಟನೆಗಳ ಸಂದರ್ಭದಲ್ಲಿ ಕೆಲವು ಗುಂಪುಗಳು ಅಂಗಡಿಗಳನ್ನು ಲೂಟಿ ಮಾಡಿದ್ದು, ವಾಹನಗಳು ಮತ್ತು ಕಟ್ಟಡಗಳಿಗೆ ಬೆಂಕಿ ಹಚ್ಚಿದ ಘಟನೆಗಳೂ ವರದಿಯಾಗಿವೆ. ಪ್ರತಿಭಟನಾಕಾರರು ಮತ್ತು ಪೊಲೀಸರ ನಡುವೆ ಘರ್ಷಣೆಗಳು ನಡೆದಿದ್ದು, ಹಿಂಸಾಚಾರಕ್ಕೆ ಅಪರಾಧ ಗುಂಪುಗಳು ಕಾರಣ ಎಂದು ಫ್ರಾನ್ಸ್ ಅಧಿಕಾರಿಗಳು ಆರೋಪಿಸಿದ್ದಾರೆ.

## ■ ಸುದ್ದಿ ಚುಟುಕು

### ಗುಟ್ಕಾ ಉಗುಳುವ ವೇಳೆ ವಿದ್ಯುತ್ ತಗುಲಿ ವ್ಯಕ್ತಿ ಸಾವು

● ವಿಕ್ರಮ ವಾಹಿನಿ । ಭೋಪಾಲ್

ಮೂರನೇ ಮಹಡಿಯ ಬಾಲ್ಕನಿಯಿಂದ ಗುಟ್ಕಾ ಉಗುಳುವಾಗ 11 ಕೆವಿ ಸಾಮರ್ಥ್ಯದ ಹೈಟೆನ್ಷನ್ ವಿದ್ಯುತ್ ತಂತಿ ತಗುಲಿ 65 ವರ್ಷದ ಪ್ರಭುಲಾಲ್ ಗುಪ್ತಾ ಮೃತಪಟ್ಟಿರುವ ಘಟನೆ ಮಧ್ಯಪ್ರದೇಶದ ಗಂಜ್‌ಬಸೋಡಾದ ಗಾಯತ್ರಿ ನಗರದಲ್ಲಿ ನಡೆದಿದೆ.

ಛತ್ತರ್‌ಪುರ ಮೂಲದ ಪ್ರಭುಲಾಲ್ ಕಳೆದ 10 ವರ್ಷಗಳಿಂದ ಬಾಡಿಗೆ ಮನೆಯಲ್ಲಿ ವಾಸವಿದ್ದರು. ಶುಕ್ರವಾರ ಮಧ್ಯಾಹ್ನ ಬಾಲ್ಕನಿಯಿಂದ ಉಗುಳುವಾಗ ವಿದ್ಯುತ್ ತಂತಿಯ ಸಂಪರ್ಕಕ್ಕೆ ಬಂದು ತೀವ್ರವಾಗಿ ಗಾಯಗೊಂಡು ಮೃತಪಟ್ಟಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಘಟನೆ ಬಳಿಕ ಆಕ್ರೋಶ ವ್ಯಕ್ತಪಡಿಸಿರುವ ನಿವಾಸಿಗಳು, ಮನೆಗಳ ಸಮೀಪ ಹಾದುಹೋಗಿರುವ ಅಪಾಯಕಾರಿ ವಿದ್ಯುತ್ ತಂತಿಗಳನ್ನು ಸ್ಥಳಾಂತರಿಸುವಂತೆ ಹಲವು ಬಾರಿ ಮನವಿ ಮಾಡಿದರೂ ಅಧಿಕಾರಿಗಳು ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ್ದಾರೆ. ವಿದ್ಯುತ್ ಕಂಬಗಳು, ತಂತಿಗಳು ಹಾಗೂ ಟ್ರಾನ್ಸ್‌ಫಾರ್ಮರ್‌ಗಳ ಸ್ಥಿತಿಯೂ ಸರಿಯಾಗಿಲ್ಲ ಎಂದು ಸ್ಥಳೀಯರು ದೂರಿದ್ದಾರೆ.

ಹೈಟೆನ್ಷನ್ ತಂತಿಗಳ ಸಮೀಪ ವಿದ್ಯುತ್ ಚಾಪ ಉಂಟಾಗುವ ಅಪಾಯವಿರುವುದರಿಂದ, ಇಂತಹ ತಂತಿಗಳಿಂದ ಸುರಕ್ಷಿತ ಅಂತರ ಕಾಯ್ದುಕೊಳ್ಳುವುದು ಅಗತ್ಯ ಎಂದು ತಜ್ಞರು ಎಚ್ಚರಿಸಿದ್ದಾರೆ.

## ಮದುವೆ ಭರವಸೆ ನೀಡಿ ವಂಚನೆ ಆರೋಪ: ಪ್ರಿಯಕರನ ಮನೆ ಮುಂದೆ ಯುವತಿ ಧರಣಿ

ಮದುವೆಯ ಭರವಸೆ ನೀಡಿ ವಂಚಿಸಿದ್ದಾರೆಂದು ಆರೋಪಿಸಿ, ಯುವತಿ ಪ್ರಿಯಕರನ ಮನೆ ಮುಂದೆ ನ್ಯಾಯಕ್ಕಾಗಿ ಧರಣಿ ನಡೆಸುತ್ತಿದ್ದಾರೆ.

● ವಿಕ್ರಮ ವಾಹಿನಿ । ಹಾಸನ

ಬೆಂಗಳೂರಿನಲ್ಲಿ ಐದು ತಿಂಗಳು ಲಿವ್-ಇನ್ ಸಂಬಂಧದಲ್ಲಿದ್ದು, ಮದುವೆಯಾಗುವುದಾಗಿ ಭರವಸೆ ನೀಡಿ ಬಳಿಕ ಕೈಕೊಟ್ಟಿದ್ದಾನೆ ಎಂದು ಆರೋಪಿಸಿ ಯುವತಿಯೊಬ್ಬರು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ಕಲ್ಲೇಸೋಮನಹಳ್ಳಿ ಗ್ರಾಮದ ಯುವಕನ ಮನೆ ಮುಂದೆ ಧರಣಿ ನಡೆಸುತ್ತಿದ್ದಾರೆ.

ಕೇರಳದ ಕಾಸರಗೋಡು ಮೂಲದ ಯುವತಿ ಹಾಗೂ ಕಲ್ಲೇಸೋಮನಹಳ್ಳಿ ಗ್ರಾಮದ ಸೂರ್ಯ ಎಂಬುವವರು ಬೆಂಗಳೂರಿನ ಖಾಸಗಿ ಕಂಪನಿಯೊಂದರಲ್ಲಿ ಒಟ್ಟಿಗೆ ಕೆಲಸ ಮಾಡುತ್ತಿದ್ದರು. ಈ ವೇಳೆ ಇಬ್ಬರ ನಡುವೆ ಪ್ರೇಮ ಸಂಬಂಧ ಬೆಳೆದಿದ್ದು, ಕಳೆದ ಐದು ತಿಂಗಳಿಂದ ಬೆಂಗಳೂರಿನಲ್ಲಿ ಒಟ್ಟಿಗೆ ವಾಸಿಸುತ್ತಿದ್ದರು ಎನ್ನಲಾಗಿದೆ. ಸೂರ್ಯ ಮದುವೆಯಾಗುವುದಾಗಿ ನಂಬಿಸಿ ಈಗ ಸಂಪರ್ಕಕ್ಕೆ ಸಿಗದೆ ಪರಾರಿಯಾಗಿದ್ದಾನೆ ಎಂದು ಯುವತಿ ಆರೋಪಿಸಿದ್ದಾರೆ.

ಯುವತಿ ಬೇರೆ ರಾಜ್ಯದವರು ಹಾಗೂ ಅನ್ಯ ಜಾತಿಗೆ ಸೇರಿದವರು ಎಂಬ ಕಾರಣಕ್ಕೆ ಸೂರ್ಯನ ಪೋಷಕರು ಮದುವೆಗೆ ವಿರೋಧ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಇದರಿಂದ ನ್ಯಾಯಕ್ಕಾಗಿ ಯುವತಿ ಸೂರ್ಯನ ಮನೆಯ ಮುಂದೆ ಹಗಲು-ರಾತ್ರಿ ಧರಣಿ ನಡೆಸುತ್ತಿದ್ದಾರೆ. ಈ ಹಿಂದೆ ನ್ಯಾಯ ಸಿಗದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ವಿಡಿಯೋ ಮಾಡಿದ್ದರೂ ಪ್ರಯೋಜನವಾಗಿಲ್ಲ ಎಂದು ಯುವತಿ ತಿಳಿಸಿದ್ದಾರೆ.

ಅಕ್ಟೋಬರ್ 22ರಂದು ಚನ್ನರಾಯಪಟ್ಟಣ ಗ್ರಾಮಾಂತರ ಪೊಲೀಸರು ಎರಡೂ ಕಡೆಯವರನ್ನು ಠಾಣೆಗೆ ಕರೆಸಿ ಮಾತುಕತೆ ನಡೆಸಿದ್ದರು. ಭಾನುವಾರ ಠಾಣೆಗೆ ಬರುವುದಾಗಿ ಹೇಳಿದ್ದ ಸೂರ್ಯನ ಪೋಷಕರು ಮನೆಗೆ ಬೀಗ ಹಾಕಿಕೊಂಡು ತೆರಳಿದ್ದಾರೆ ಎಂದು ಯುವತಿ ಆರೋಪಿಸಿದ್ದಾರೆ. ಈ ಸಂಬಂಧ ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣೆಯಲ್ಲಿಯೂ ದೂರು ದಾಖಲಿಸಿರುವುದಾಗಿ ತಿಳಿಸಿದ್ದಾರೆ.

ಸೂರ್ಯನ ತಂಗಿಗೂ ತಮ್ಮಿಬ್ಬರ ಲಿವ್-ಇನ್ ಸಂಬಂಧದ ಬಗ್ಗೆ ತಿಳಿದಿತ್ತು. ಆಕೆ ಮೂರು ತಿಂಗಳು ತಮ್ಮೊಂದಿಗೆ ವಾಸವಿದ್ದಳು. ತಂಗಿಯ ಮದುವೆಯಾದ ಬಳಿಕ ತಮ್ಮನ್ನು ಮದುವೆಯಾಗುವಂತೆ ಸೂರ್ಯನಿಗೆ ಪೋಷಕರು ಹೇಳಿದ್ದರು ಎಂದು ಯುವತಿ ಆರೋಪಿಸಿದ್ದಾರೆ. ಪ್ರಕರಣದ ಕುರಿತು ಪೊಲೀಸರ ಮುಂದಿನ ಕ್ರಮದ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ.

## ಮತ ಎಣಿಕೆ ಕೇಂದ್ರಕ್ಕೆ ಮೊಬೈಲ್, ಆಯುಧ ನಿಷೇಧ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರ ಹಾಗೂ ಆಗ್ನೇಯ ಪದವೀಧರರ ಕ್ಷೇತ್ರಗಳ ದ್ವೈವಾರ್ಷಿಕ ಚುನಾವಣೆ-2026ರ ಮತ ಎಣಿಕೆ ಅ. 27ರಂದು ನಡೆಯಲಿದ್ದು, ಮತ ಎಣಿಕೆ ಕೇಂದ್ರದೊಳಗೆ ಮೊಬೈಲ್ ಫೋನ್, ಕ್ಯಾಮೆರಾ, ಆಯುಧ ಸೇರಿದಂತೆ ಹಲವು ವಸ್ತುಗಳನ್ನು ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ. ಈ ಕುರಿತು ಕಂದಾಯ ಇಲಾಖೆಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ಕೇಂದ್ರ ವಿಭಾಗದ ಉಪ




ಪೊಲೀಸ್ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಮತ ಎಣಿಕೆಗೆ ಆಗಮಿಸುವ ಅಭ್ಯರ್ಥಿಗಳು, ಚುನಾವಣಾ ಏಜೆಂಟರು, ಮತ ಎಣಿಕೆ ಏಜೆಂಟರು, ಸಿಬ್ಬಂದಿ ಹಾಗೂ ಕರ್ತವ್ಯಕ್ಕೆ ನಿಯೋಜಿತ ಇತರ ಅಧಿಕಾರಿಗಳು ನಿಷೇಧಿತ ವಸ್ತುಗಳನ್ನು ಕೇಂದ್ರದೊಳಗೆ ತರದಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಮೊಬೈಲ್ ಫೋನ್, ಕ್ಯಾಮೆರಾ, ಕ್ಯಾಮೆರಾ ಹೊಂದಿರುವ ವಸ್ತುಗಳು, ಹರಿತವಾದ ವಸ್ತುಗಳು, ಆಯುಧಗಳು, ಶಾಯಿ, ದ್ರವ ಪದಾರ್ಥಗಳು, ಕಾಗದ ಹಾಗೂ ಬ್ಯಾಗ್‌ಗಳನ್ನು ಮತ ಎಣಿಕೆ ಕೇಂದ್ರದೊಳಗೆ ಕೊಂಡೊಯ್ಯುವಂತಿಲ್ಲ. ಸರ್ಕಾರಿ ಕಲಾ ಕಾಲೇಜಿನ ಮುಂಭಾಗದ ಮುಖ್ಯ ದ್ವಾರದಲ್ಲೇ ಪರಿಶೀಲನೆ ನಡೆಸಿ, ನಿಷೇಧಿತ ವಸ್ತುಗಳನ್ನು ವಶಪಡಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

## ರೂ 100 ಕೋಟಿ ಶಾಲಾ ಹಗರಣ: ಮಾಜಿ ಸಚಿವ ಬಂಧನ

● ವಿಕ್ರಮ ವಾಹಿನಿ । ಚೆನ್ನೈ

ಖಾಸಗಿ ಶಾಲೆಗಳಿಗೆ ಮಾನ್ಯತೆ ಹಾಗೂ ಆಡಳಿತಾತ್ಮಕ ಅನುಮೋದನೆ ನೀಡುವ ವಿಚಾರದಲ್ಲಿ ಲಂಚ ಪಡೆದ ಆರೋಪಕ್ಕೆ ಸಂಬಂಧಿಸಿದಂತೆ ತಮಿಳುನಾಡಿನ ಮಾಜಿ ಶಿಕ್ಷಣ ಸಚಿವ ಹಾಗೂ ಡಿಎಂಕೆ ನಾಯಕ ಅನ್ಬಿಲ್ ಮಹೇಶ್ ಪೊಯ್ಯಮೋಳಿ ಅವರನ್ನು ಪೊಲೀಸರು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಮದ್ರಾಸ್ ಹೈಕೋರ್ಟ್ ಅವರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ತಿರಸ್ಕರಿಸಿದ ಬಳಿಕ ಗ್ರೇಟರ್ ಚೆನ್ನೈ ಪೊಲೀಸರ ಕೇಂದ್ರ ಅಪರಾಧ ವಿಭಾಗ (ಸಿಸಿಬಿ) ಈ ಕ್ರಮ ಕೈಗೊಂಡಿದೆ. 2ನೇ ಪುಟಕ್ಕೆ...

## ತಮಿಳುನಾಡಿನಲ್ಲ ಭಾರಿ ಮಳೆ: ಸಿಡಿಲಿಗೆ 14 ಬಲಿ

● ವಿಕ್ರಮ ವಾಹಿನಿ । ಚೆನ್ನೈ

ಬಂಗಾಳ ಕೊಲ್ಲಿಯಲ್ಲಿ ಉಂಟಾದ ಹವಾಮಾನ ವೈಪರೀತ್ಯದಿಂದ ತಮಿಳುನಾಡಿನ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಸಿಡಿಲು ಬಡಿದು ರಾಜ್ಯದಲ್ಲಿ 14 ಮಂದಿ ಮೃತಪಟ್ಟಿದ್ದು, ಮೃತರ ಕುಟುಂಬಗಳಿಗೆ ತಲಾ 4 ಲಕ್ಷ ಪರಿಹಾರ ವಿತರಿಸಲಾಗಿದೆ ಎಂದು ಕಂದಾಯ ಸಚಿವ ಕೆ.ಎ. ಸೆಂಗೊಟ್ಟೆಯನ್ ತಿಳಿಸಿದ್ದಾರೆ.

ಮಳೆಯಿಂದಾಗಿ ನೀಲಗಿರಿ ಜಿಲ್ಲೆಯಲ್ಲಿ 62 ಕಡೆ ಭೂಕುಸಿತ ಸಂಭವಿಸಿದ್ದು, ಪ್ರಮುಖ ರಸ್ತೆಗಳಲ್ಲಿ ಸಂಚಾರಕ್ಕೆ ಅಡ್ಡಿಯಾಗಿದೆ. ಮಣ್ಣು ತೆರವುಗೊಳಿಸಿ ರಸ್ತೆಗಳನ್ನು ಪುನಃ ಸಂಚಾರಕ್ಕೆ ಮುಕ್ತಗೊಳಿಸಲು ರಕ್ಷಣಾ ಸಿಬ್ಬಂದಿ ಮತ್ತು ಯಂತ್ರೋಪಕರಣಗಳ ನೆರವಿನಿಂದ ಕಾರ್ಯಾಚರಣೆ ನಡೆ ಯುತ್ತಿದೆ.

ಕೊಡೈಕೆನಾಲ್‌ನ ತಗ್ಗು ಪ್ರದೇಶಗಳಲ್ಲಿನ 20ಕ್ಕೂ ಹೆಚ್ಚು ಮನೆಗಳಿಗೆ ನೀರು ನುಗ್ಗಿದ್ದು, ನಿವಾಸಿಗಳನ್ನು ಸುರಕ್ಷಿತ ಪರಿಹಾರ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿದೆ. 2ನೇ ಪುಟಕ್ಕೆ...

## ವಿಚಾರಣೆಗೂ ಮುನ್ನ ಗೃಹಹಿಂಸೆ ಪ್ರಕರಣ ರದ್ದು ಅಸಾಧ್ಯ: ಹೈಕೋರ್ಟ್

● ವಿಕ್ರಮ ವಾಹಿನಿ । ಬೆಂಗಳೂರು

ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯಡಿ ದಾಖಲಾಗಿರುವ ಪ್ರಕರಣವನ್ನು ಪೂರ್ಣ ವಿಚಾರಣೆಗೂ ಮುನ್ನ ರದ್ದುಪಡಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ಪತ್ನಿಗೆ ಗೃಹಹಿಂಸೆ ನೀಡಿದ ಆರೋಪ ಎದುರಿಸುತ್ತಿರುವ ವ್ಯಕ್ತಿಯೊಬ್ಬರು ಪ್ರಕರಣ ರದ್ದು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಚ್.ಪಿ. ಸಂದೇಶ್ ಅವರಿದ್ದ ನ್ಯಾಯಪೀಠ ವಜಾಗೊಳಿಸಿದೆ.
2ನೇ ಪುಟಕ್ಕೆ...

## ಆಯ್ದ ಕಾರುಗಳಿಗೆ ಎಥನಾಲ್ ಬಳಕೆಗೆ ಅನುಮತಿ

● ವಿಕ್ರಮ ವಾಹಿನಿ । ನವದೆಹಲಿ

ಶೇ.85 ಮತ್ತು ಶೇ.100 ಎಥೆನಾಲ್ ಇಂಧನದಲ್ಲಿ ಚಲಿಸುವ ಫ್ಲೆಕ್ಸ್-ಫ್ಯುಯೆಲ್ ಕಾರುಗಳಿಗೆ ಕೇಂದ್ರ ಸರ್ಕಾರ ಅಧಿಕೃತ ಅನುಮತಿ ನೀಡಿದೆ. ಕೇಂದ್ರ ಮೋಟಾರು ವಾಹನ ನಿಯಮಗಳಿಗೆ ತಿದ್ದುಪಡಿ ತಂದು ಅಧಿಸೂಚನೆ ಹೊರಡಿಸಿದ್ದು, ಎಥೆನಾಲ್ ಆಧಾರಿತ ವಾಹನಗಳ ಬಳಕೆಗೆ ಮಹತ್ವದ ಹೆಜ್ಜೆ ಇಟ್ಟಿದೆ.

ಇ85 ಮತ್ತು ಇ100 ಇಂಧನಗಳನ್ನು ಬಳಸಲು ನಿರ್ದಿಷ್ಟವಾಗಿ ವಿನ್ಯಾಸಗೊಳಿಸಿ, ಪ್ರಮಾಣೀಕರಿಸಿದ ವಾಹನಗಳಲ್ಲಿ ಮಾತ್ರ ಈ ಇಂಧನಗಳನ್ನು ಬಳಸಬಹುದು. ಸಾಮಾನ್ಯ ಪೆಟ್ರೋಲ್ ಅಥವಾ ಇ20 ಇಂಧನಕ್ಕೆ ಹೊಂದುವ ಕಾರುಗಳಲ್ಲಿ ಇ85 ಅಥವಾ ಇ100



ಬಳಸಲು ಅವಕಾಶವಿಲ್ಲ. ಈಗಾಗಲೇ ಬಳಕೆಯಲ್ಲಿರುವ ವಾಹನಗಳ ಮಾಲೀಕರು ಇಂಧನ ಬದಲಾಯಿಸುವ ಅಥವಾ ವಾಹನದಲ್ಲಿ ಮಾರ್ಪಾಡು ಮಾಡುವ ಅಗತ್ಯವಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಫ್ಲೆಕ್ಸ್-ಫ್ಯುಯೆಲ್ ತಂತ್ರಜ್ಞಾನದಲ್ಲಿ ಒಂದೇ ಇಂಧನ ಟ್ಯಾಂಕ್ ಮೂಲಕ ಪೆಟ್ರೋಲ್ ಮತ್ತು ಎಥೆನಾಲ್‌ನ ವಿವಿಧ ಮಿಶ್ರಣಗಳನ್ನು ಬಳಸಬಹುದು. ಬ್ರೆಜಿಲ್ ಮತ್ತು ಅಮೆರಿಕ ಸೇರಿದಂತೆ ಹಲವು ದೇಶಗಳಲ್ಲಿ ಈ ತಂತ್ರಜ್ಞಾನ ಬಳಕೆಯಲ್ಲಿದೆ. ಭಾರತದಲ್ಲಿಯೂ ಕೆಲವು ವಾಹನ ತಯಾರಕರು ಇ100 ಮಾದರಿಗಳನ್ನು ಪರಿಚಯಿಸಲು ಸಿದ್ಧತೆ ನಡೆಸಿದ್ದಾರೆ. ಎಥೆನಾಲ್ ಬಳಕೆಯಿಂದ ವಾಹನಗಳ ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡಲು ಹಾಗೂ ಕಚ್ಚಾ ತೈಲ ಆಮದಿನ ಮೇಲಿನ ಅವಲಂಬನೆಯನ್ನು ತಗ್ಗಿಸಲು ನೆರವಾಗಬಹುದು. ಈ ಹಿನ್ನೆಲೆಯಲ್ಲಿ ಹೆಚ್ಚಿನ ಎಥೆನಾಲ್ ಮಿಶ್ರಣದ ಇಂಧನಕ್ಕೆ ಅನುಮತಿ ನೀಡಿರುವುದು ಪರ್ಯಾಯ ಇಂಧನ ಬಳಕೆಗೆ ಉತ್ತೇಜನ ನೀಡುವ ಕ್ರಮವಾಗಿದೆ.

## ಚಂದ್ರಚೂಡ್ ಸರ್ಕಾರಕ್ಕೆ ಹೆಚ್ಚು ಮಣಿದರು: ನ್ಯಾ. ಕೌಲ್

● ವಿಕ್ರಮ ವಾಹಿನಿ । ನವದೆಹಲಿ

ನ್ಯಾಯಾಧೀಶರ ನೇಮಕಾತಿ ವಿಚಾರದಲ್ಲಿ ಮಾಜಿ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ಅವರು ಕೇಂದ್ರ ಸರ್ಕಾರದೊಂದಿಗೆ ಸಮಾಲೋಚನೆ ನಡೆಸುವಾಗ ಅಗತ್ಯಕ್ಕಿಂತ ಹೆಚ್ಚು ಮಣಿಯುವ ಪ್ರವೃತ್ತಿ ತೋರಿದ್ದರು ಎಂದು ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಸಂಜಯ್ ಕಿಶನ್ ಕೌಲ್ ಹೇಳಿದ್ದಾರೆ.

ತಮ್ಮ ಮುಂಬರುವ 'Without Fear or Favour' ಪುಸ್ತಕದಲ್ಲಿ ಈ ಅಭಿಪ್ರಾಯಗಳನ್ನು ದಾಖಲಿಸಿರುವ ಕೌಲ್, ಕೊಲಿಜಿಯಂ ನಿರ್ಧಾರ ಕೈಗೊಳ್ಳುವ ಮೊದಲೇ ಸರ್ಕಾರದ ಅಭಿಪ್ರಾಯ ಪಡೆಯುವ ಪದ್ಧತಿ ಕಳವಳಕಾರಿ ಎಂದು ತಿಳಿಸಿದ್ದಾರೆ. ಸರ್ಕಾರದೊಂದಿಗೆ ಸಮಾಲೋಚನೆ ನಡೆಸುವುದರಲ್ಲಿ ತಪ್ಪಿಲ್ಲ. ಆದರೆ, ಅದು ಕೊಲಿಜಿಯಂ ನಿರ್ಧಾರದ ನಂತರ ನಡೆಯಬೇಕು ಎಂಬುದು ಅವರ ನಿಲುವು.

ನ್ಯಾಯಾಧೀಶರ ನೇಮಕಾತಿಗೆ ಸಂಬಂಧಿಸಿದಂತೆ ಕೊಲಿಜಿಯಂ ಶಿಫಾರಸುಗಳನ್ನು ಜಾರಿಗೊಳಿಸುವಲ್ಲಿ ಕೇಂದ್ರ ಸರ್ಕಾರ ವಿಳಂಬ ಮಾಡುತ್ತಿರುವುದನ್ನು ಪ್ರಶ್ನಿಸಿದ್ದ ಪ್ರಕರಣವನ್ನು ತಮ್ಮ ಪೀಠದಿಂದ ಹಿಂಪಡೆಯಲಾಗಿತ್ತು. ಈ ಬೆಳವಣಿಗೆ ತಮಗೆ ಬೇಸರ ಉಂಟುಮಾಡಿತ್ತು ಎಂದು ಕೌಲ್ ಹೇಳಿದ್ದಾರೆ. 2ನೇ ಪುಟಕ್ಕೆ...

## 2 ವರ್ಷ 10 ತಿಂಗಳಲ್ಲೇ ತಬಲಾ ವಾದನದಲ್ಲಿ ದಾಖಲೆ ಬರೆದ ಸ್ವರಶ್ರೀ

● ವಿಕ್ರಮ ವಾಹಿನಿ । ಹೊನ್ನಾವರ

ಸಾಮಾನ್ಯವಾಗಿ ಈ ವಯಸ್ಸಿನ ಮಕ್ಕಳು ಆಟವಾಡುತ್ತಾ ಬಾಲ್ಯ ಕಳೆಯುತ್ತಾರೆ. ಆದರೆ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಕೇವಲ 2 ವರ್ಷ 10 ತಿಂಗಳ ಬಾಲಕಿ ಸ್ವರಶ್ರೀ ಹೆಗಡೆ ತಬಲಾ ವಾದನದಲ್ಲಿ ಅಪರೂಪದ ಸಾಧನೆ ಮಾಡಿ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಪಡೆದಿದ್ದಾಳೆ.

ಸ್ವರಶ್ರೀ 12 ತಾಳಗಳನ್ನು ಅವುಗಳ ಬೋಲ್‌ಗಳ ಸಹಿತ ತಪ್ಪಿಲ್ಲದೆ ಹೇಳುವುದರ ಜತೆಗೆ ತಬಲಾದಲ್ಲಿ ನುಡಿಸುವ ಮೂಲಕ ಈ ಸಾಧನೆ ಮಾಡಿದ್ದಾಳೆ. ಪುಟ್ಟ ವಯಸ್ಸಿನಲ್ಲೇ ಆಕೆ ತೋರಿರುವ ಸಂಗೀತ ಪ್ರತಿಭೆ ಸಂಗೀತಾಸಕ್ತರ ಗಮನ ಸೆಳೆದಿದೆ ಅಡುಕಳದ ಖ್ಯಾತ ತಬಲಾ ವಾದಕ ಗುರುರಾಜ ಹೆಗಡೆ ಹಾಗೂ ಇಂಗ್ಲಿಷ್ ಪ್ರಾಧ್ಯಾಪಕಿ, ಹಿಂದೂಸ್ತಾನಿ ಗಾಯಕಿ ಶ್ರೀಲತಾ ದಂಪತಿಯ ಪುತ್ರಿ ಸ್ವರಶ್ರೀ. 2ನೇ ಪುಟಕ್ಕೆ...

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಮುಂದಿರುವ ಹುಣ್ಣಿಮೆಯ ಸೊಬಗನ್ನು ಸವಿಯದೆ ಮುಂಬರಲಿರುವ ಅಮಾವಾಸ್ಯೆಯನ್ನು ನೆನೆದು ಕೊರಗುವುದು ವಿವೇಕವೆನ್ನಿಸದು.

### ದಿನ ಪಂಚಾಂಗ

ಅಕ್ಟೋಬರ್, 27-2026, ಮಂಗಳವಾರ ಶರದ್ ಋತು, ಆಶ್ವಯುಜ ಮಾಸ, ಶುದ್ಧ ಪಕ್ಷ ಪಾಡ್ಯ ತಿಥಿ ಬೆ.8:19, ಭರಣಿ ನಕ್ಷತ್ರ ಸಾ.6:11, ರಾಹುಕಾಲ ಮ 2:59-4:27
ಸಿಂಧಗೀ ಭೀಮಾಶಂಕರ ಆರಾಧನೆ

# ಗ್ರಾಮೀಣ ಮಕ್ಕಳ ಶಿಕ್ಷಣಕ್ಕೆ ಸಮಾಜದ ಸಹಕಾರ ಅಗತ್ಯ: ಪ್ರಕಾಶನಾಥ ಸ್ವಾಮೀಜಿ

● ವಿಕ್ರಮ ವಾಹಿನಿ | ಬೆಂಗಳೂರು

ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ಆರೋಗ್ಯ ಸೇವೆ ಹಾಗೂ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಆರ್ಥಿಕವಾಗಿ ಸಬಲರಾಗಿರುವವರು ಮುಂದಾಗಬೇಕು. ಸಮಾಜಕ್ಕೆ ಕೊಡುಗೆ ನೀಡುವ ಉದ್ದೇಶದಿಂದ ಕಾರ್ಯನಿರ್ವಹಿಸುವವರನ್ನು ಪ್ರೋತ್ಸಾಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಎಸ್‌ಜೆಬಿ ಮತ್ತು ಬಿಜಿಎಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಶ್ರೀಶ್ರೀ ಪ್ರಕಾಶನಾಥ ಸ್ವಾಮೀಜಿ ಹೇಳಿದರು.

ಖ್ಯಾತ ಉದ್ಯಮಿ ಹಾಗೂ ಪರಿಸರವಾದಿ ರೇವತಿ ಕಾಮತ್ ಅವರ ನೇತೃತ್ವದಲ್ಲಿ ಆರಂಭಿಸಲಾದ 'ಅಕ್ಷರದಾನ' ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸಮಾಜದ ಅಭಿವೃದ್ಧಿಗಾಗಿ ರೇವತಿ ಕಾಮತ್ ಅವರು ಕೈಗೊಂಡಿರುವ ಕಾರ್ಯ ಶ್ಲಾಘನೀಯ.

ಹಿಂದೆ ಬಾಲಗಂಗಾಧರನಾಥ ಶ್ರೀಗಳು ಗ್ರಾಮೀಣ ಭಾಗಗಳಲ್ಲಿ ಶಿಕ್ಷಣದ ಬೀಜ ಬಿತ್ತಿ ನೂರಾರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದ್ದರು. ಅದೇ ಹಾದಿಯಲ್ಲಿ ರೇವತಿ ಕಾಮತ್ ಅವರು ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸಲು ಮುಂದಾಗಿರುವುದು ಮಾದರಿಯಾಗಿದೆ ಎಂದರು.



**ಸರ್ಕಾರಿ ಶಾಲೆಗಳ ಅಭಿವೃದ್ಧಿಯೇ ದೇಶದ ಪ್ರಗತಿಗೆ ಅಡಿಪಾಯ:** ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಿದರೆ ದೇಶದ ಪ್ರಗತಿಗೂ ಬಲ ಸಿಗಲಿದೆ. ಬಡತನದ ಕಾರಣಕ್ಕೆ ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗಬಾರದು. ಪ್ರತಿಯೊಂದು ಮಗುವಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂದು ರೇವತಿ ಕಾಮತ್ ಹೇಳಿದರು.

ಅಣ್ಣಿಗೇರಿ ಶಾಲೆಗೆ ಶೌಚಾಲಯ ನಿರ್ಮಿಸಿಕೊಡುವ ಉದ್ದೇಶದಿಂದ ಮೊದಲ ಬಾರಿ ಭೇಟಿ ನೀಡಿದ್ದೆ. ಆದರೆ, ಅಲ್ಲಿನ ಪರಿಸ್ಥಿತಿ ಕಂಡು ಆಘಾತವಾಯಿತು. ಮೂಲಸೌಕರ್ಯಗಳ ಕೊರತೆ, ಸೂಕ್ತ ಕಟ್ಟಡವಿಲ್ಲದೆ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿರುವುದು ಹಾಗೂ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳು ಇಡೀ ಶಾಲೆಯ ಅಭಿವೃದ್ಧಿಗೆ ನೆರವಾಗಬೇಕೆಂಬ ಸಂಕಲ್ಪ ಮೂಡಿಸಿದವು ಎಂದು ತಿಳಿಸಿದರು.

ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರು ನಿವೃತ್ತರಾದ ಬಳಿಕ ಅವರ ಸ್ಥಾನಕ್ಕೆ ತಕ್ಷಣವೇ ಹೊಸ ಶಿಕ್ಷಕರನ್ನು ನೇಮಿಸದಿರುವುದು ಶಿಕ್ಷಣದ ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತಿದೆ. ಹರಿದ ಚಪ್ಪಲಿ ಧರಿಸಿ ಶಾಲೆಗೆ ಬರುವ ಮಕ್ಕಳು, ನೋಟ್‌ಬುಕ್ ಮತ್ತು ಪಠ್ಯಪುಸ್ತಕಗಳನ್ನು ಖರೀದಿಸಲೂ ಸಾಧ್ಯವಾಗದ ಕುಟುಂಬಗಳ ಪರಿಸ್ಥಿತಿ ನೋವುಂಟು ಮಾಡುತ್ತದೆ. ಇಂತಹ ಮಕ್ಕಳ ಸಂಕಷ್ಟವನ್ನು ಸಮಾಜ ಅರ್ಥಮಾಡಿಕೊಂಡು, ಅವರ ಶಿಕ್ಷಣಕ್ಕೆ ಕೈಲಾದ ನೆರವು ನೀಡಬೇಕು ಎಂದು ಮನವಿ ಮಾಡಿದರು.

**ಶಿಕ್ಷಣ ಕ್ಷೇತ್ರಕ್ಕೆ ಸರ್ಕಾರಗಳ ಆದ್ಯತೆ ಸಾಲದು: ಸುಧಾಕರ್:** ಶಿಕ್ಷಣ ತಜ್ಞರ ನೇತೃತ್ವದಲ್ಲಿ ಹಲವು ವರದಿಗಳು ಸಲ್ಲಿಕೆಯಾಗಿದ್ದರೂ, ಶಿಕ್ಷಣ ಕ್ಷೇತ್ರದಲ್ಲಿ ನಿರೀಕ್ಷಿತ ಬದಲಾವಣೆ ಕಂಡುಬಂದಿಲ್ಲ. ಸರ್ಕಾರಗಳು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡದಿರುವುದು ಬೇಸರದ ಸಂಗತಿ ಎಂದು ಮಾಜಿ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್ ಅಭಿಪ್ರಾಯಪಟ್ಟರು.

ರಾಜಕೀಯ ವ್ಯವಸ್ಥೆಯಲ್ಲಿ ಜನರಿಂದ ವಿವಿಧ ಬೇಡಿಕೆಗಳು ವ್ಯಕ್ತವಾಗುತ್ತವೆ. ಆದರೆ, ಈ ನಡುವೆ ಶಿಕ್ಷಣ ಕ್ಷೇತ್ರಕ್ಕೆ ಅಗತ್ಯವಾದ ಗಮನ ಮತ್ತು ಆದ್ಯತೆ ದೊರೆಯುತ್ತಿಲ್ಲ. ಶಿಕ್ಷಣದ ಅಭಿವೃದ್ಧಿಗೆ ಸರ್ಕಾರಗಳು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪದ್ಮಶ್ರೀ ಪುರಸ್ಕೃತ ಮನೋವೈದ್ಯ ಡಾ. ಸಿ.ಆರ್. ಚಂದ್ರಶೇಖರ್, ಕರ್ನಾಟಕ ಲೋಕಾಯುಕ್ತದ ಜಾಗೃತ ವಿಭಾಗದ ನಿವೃತ್ತ ಡಿಐಜಿ ಡಾ. ಡಿ.ಎನ್. ಮುನಿಕೃಷ್ಣ, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಕೆ. ರವಿ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ನಿವೃತ್ತ ಕುಲಪತಿ ಡಾ. ಚಂದ್ರಶೇಖರ, ರೋಟರಿ ಅಧ್ಯಕ್ಷೆ ಪ್ರೊ. ಎಲಿಜಬೆತ್ ಚೆರಿಯನ್, ಅಕ್ಷರದಾನದ ಸಾಗರೋತ್ತರ ಕಾರ್ಯಾಚರಣೆಗಳ ಅಧ್ಯಕ್ಷೆ ಅನಿತಾ ದಾಸಪ್ಪ, ಪ್ರೊ. ಕೆ.ಎಸ್. ನಾಗೇಶ್, ಸಾಹಿತಿ ಡಾ. ಅಭಿನಂದನ್ ಬೃಂದಾವನಿ ಹಾಗೂ ಉದ್ಯಮಿ ಸಿ.ಪಿ. ಮನು ಉಪಸ್ಥಿತರಿದ್ದರು.

# 2 ವರ್ಷ 10 ತಿಂಗಳಲ್ಲೇ ತಬಲಾ ವಾದನದಲ್ಲಿ ದಾಖಲೆ ಬರೆದ ಸ್ವರಶ್ರೀ

1ನೇ ಪುಟದಿಂದ

ತಂದೆ ಗುರುರಾಜ ಹೆಗಡೆ ಅವರು ವಿದ್ವಾನ್ ಶೇಷಾದ್ರಿ ಅಯ್ಯಂಗಾರ್ ಅವರ ಶಿಷ್ಯರಾಗಿದ್ದಾರೆ.

**ಒಂದು ವರ್ಷದಿಂದಲೇ ತಬಲಾದ ಮೇಲೆ ಆಸಕ್ತಿ:** ಸ್ವರಶ್ರೀಗೆ ಒಂದು ವರ್ಷದ ಮಗುವಾಗಿದ್ದಾಗಲೇ ತಬಲಾದ ಮೇಲೆ ಆಸಕ್ತಿ ಮೂಡಿತ್ತು. ತಬಲಾ ಕಂಡಾಗಲೆಲ್ಲ ಅದರ ಮೇಲೆ ಕೈಯಾಡಿಸುತ್ತಿದ್ದಳು. ಕೆಲವೊಮ್ಮೆ ತಬಲಾದ ಮೇಲೆಯೇ ಮಲಗುತ್ತಿದ್ದಳು ಎಂದು ಪೋಷಕರು ನೆನಪಿಸಿಕೊಳ್ಳುತ್ತಾರೆ.

ಮಗಳ ಆಸಕ್ತಿಯನ್ನು ಗಮನಿಸಿದ ಪೋಷಕರು ಆಕೆಗೆ ಅನುಕೂಲವಾಗುವಂತೆ ಎರಡು ಸಣ್ಣ ತಬಲಾಗಳನ್ನು ವಿಶೇಷವಾಗಿ ತಯಾರಿಸಿದ್ದರು. ತಂದೆ ತಮ್ಮ ವಿದ್ಯಾರ್ಥಿಗಳಿಗೆ ತಬಲಾ ಪಾಠ ಹೇಳಿಕೊಡುವಾಗ ಸ್ವರಶ್ರೀ ಅವರ ಪಕ್ಕದಲ್ಲೇ ಕುಳಿತು ಗಮನಿಸುತ್ತಿದ್ದಳು. ಹೀಗೆ ತಂದೆ ಕಲಿಸುತ್ತಿದ್ದ 12 ತಾಳಗಳು ಮತ್ತು ಅವುಗಳ ಬೋಲ್‌ಗಳನ್ನು ಕಲಿತುಕೊಂಡಳು ಎಂದು ತಾಯಿ ಶ್ರೀಲತಾ ತಿಳಿಸಿದ್ದಾರೆ.

**ಸಂಗೀತಮಯ ವಾತಾವರಣದಲ್ಲಿ ಪ್ರತಿಭೆಯ ವಿಕಸನ:** ಹೊನ್ನಾವರದಲ್ಲಿ ಸಂಗೀತ ಶಾಲೆಯನ್ನೂ ನಡೆಸುತ್ತಿರುವ ಗುರುರಾಜ ಹೆಗಡೆ ಮತ್ತು ಶ್ರೀಲತಾ ದಂಪತಿಯ ಮನೆಯಲ್ಲಿ ಸದಾ ಸಂಗೀತದ ವಾತಾವರಣವಿರುತ್ತದೆ. ಇದೇ ವಾತಾವರಣ ಸ್ವರಶ್ರೀಯ ಆಸಕ್ತಿ ಮತ್ತು ಪ್ರತಿಭೆ ಬೆಳೆಯಲು ನೆರವಾಗಿದೆ ಎಂದು ಪೋಷಕರು ತಿಳಿಸಿದ್ದಾರೆ.

ಇಷ್ಟು ಚಿಕ್ಕ ವಯಸ್ಸಿನಲ್ಲೇ ತಾಳಗಳನ್ನು ಗುರುತಿಸಿ, ಅವುಗಳನ್ನು ನಿಖರವಾಗಿ ನುಡಿಸುವ ಮೂಲಕ ದಾಖಲೆ ನಿರ್ಮಿಸಿರುವ ಸ್ವರಶ್ರೀಯ ಸಾಧನೆಗೆ ಕುಟುಂಬದವರು ಹೆಮ್ಮೆ ವ್ಯಕ್ತಪಡಿಸಿದ್ದಾರೆ. ಬಾಲಕಿ ತಬಲಾ ನುಡಿಸುತ್ತಿರುವ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಗಮನ ಸೆಳೆಯುತ್ತಿದ್ದು, ಸಂಗೀತಾಸಕ್ತರು ಹಾಗೂ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ತಬಲಾ ವಾದನದಲ್ಲಿ ತಾಳಗಳ ಕ್ರಮ, ಬೋಲ್‌ಗಳ ಉಚ್ಚಾರಣೆ ಹಾಗೂ ಲಯದ ಹೊಂದಾಣಿಕೆ ಮುಖ್ಯವಾಗಿದ್ದು, ಇವುಗಳನ್ನು ಅಭ್ಯಾಸದ ಮೂಲಕ ಕರಗತ ಮಾಡಿಕೊಳ್ಳಬೇಕಾಗುತ್ತದೆ.

ಸ್ವರಶ್ರೀಯ ಮುಂದಿನ ಸಂಗೀತ ಪಯಣಕ್ಕೆ ಕುಟುಂಬದವರು ಹೆಚ್ಚಿನ ಪ್ರೋತ್ಸಾಹ ನೀಡುವ ಆಶಯ ಹೊಂದಿದ್ದಾರೆ. ಬಾಲಕಿಯ ಪ್ರತಿಭೆ ಇನ್ನಷ್ಟು ಬೆಳೆಯಲಿ, ಸಂಗೀತ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಲಿ ಎಂದು ಹೊನ್ನಾವರದ ಸಂಗೀತಾಸಕ್ತರು ಹಾಗೂ ಸ್ಥಳೀಯರು ಹಾರೈಸಿದ್ದಾರೆ.

ಆರಂಭಿಕ ಹಂತದಲ್ಲೇ ದಾಖಲೆ ಪುಸ್ತಕದಲ್ಲಿ ಸ್ಥಾನ ಪಡೆದಿರುವ ಸ್ವರಶ್ರೀ, ತನ್ನ ವಿಶಿಷ್ಟ ಸಾಧನೆಯ ಮೂಲಕ ಊರಿಗೆ ಹೆಮ್ಮೆ ತಂದಿದ್ದಾಳೆ.

# ಚಂದ್ರಚೂಡ್ ಸರ್ಕಾರಕ್ಕೆ ಹೆಚ್ಚು ಮಣಿದರು: ನ್ಯಾ. ಕೌಲ್

1ನೇ ಪುಟದಿಂದ

2023ರ ನವೆಂಬರ್‌ನಲ್ಲಿ ತಮ್ಮ ಪೀಠವು ನ್ಯಾಯಾಧೀಶರ ವರ್ಗಾವಣೆ ಮತ್ತು ನೇಮಕಾತಿ ಶಿಫಾರಸುಗಳ ಅನುಷ್ಠಾನದ ಕುರಿತು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿತ್ತು.

ಚಂದ್ರಚೂಡ್ ಅವರ ನ್ಯಾಯಾಂಗ ಸಾಮರ್ಥ್ಯದ ಬಗ್ಗೆ ತಮಗೆ ಆಕ್ಷೇಪವಿಲ್ಲ. ಆದರೆ, ಸರ್ಕಾರದೊಂದಿಗೆ ವ್ಯವಹರಿಸುವಾಗ ಅವರು ಅಗತ್ಯಕ್ಕಿಂತ ಹೆಚ್ಚು ಸಹಕಾರದ ಮನೋಭಾವ ತೋರಿದರು ಎಂದು ಕೌಲ್ ಅಭಿಪ್ರಾಯಪಟ್ಟಿದ್ದಾರೆ.

ಇದಕ್ಕೆ ಪ್ರತಿಕ್ರಿಯಿಸಿರುವ ಚಂದ್ರಚೂಡ್, ತಮ್ಮ ಅಧಿಕಾರಾವಧಿಯಲ್ಲಿ ಸುಪ್ರೀಂ ಕೋರ್ಟ್ ನೇಮಕಾತಿಗೆ ಸಂಬಂಧಿಸಿದ ಕೊಲಿಜಿಯಂ ನಿರ್ಣಯಗಳು ಸರ್ವಾನುಮತದಿಂದ ಅಂಗೀಕಾರವಾಗಿದ್ದವು ಎಂದು ತಿಳಿಸಿದ್ದಾರೆ. ಈ ಹೇಳಿಕೆಗಳು ನ್ಯಾಯಾಂಗ ನೇಮಕಾತಿ ಪ್ರಕ್ರಿಯೆಯಲ್ಲಿ ಸರ್ಕಾರ ಮತ್ತು ಕೊಲಿಜಿಯಂ ನಡುವಿನ ಸಂಬಂಧದ ಕುರಿತು ಹೊಸ ಚರ್ಚೆಗೆ ಕಾರಣವಾಗಿವೆ.

# ವಿಚಾರಣೆಗೂ ಮುನ್ನ ಗೃಹಹಿಂಸೆ ಪ್ರಕರಣ ರದ್ದು ಅಸಾಧ್ಯ: ಹೈಕೋರ್ಟ್

1ನೇ ಪುಟದಿಂದ

ಕೆನಡಾದ ಟೊರಾಂಟೋದಲ್ಲಿ ನೆಲೆಸಿರುವ ಸಬುಜ್ ಪಾಲ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಪೀಠ, ಪತ್ನಿ ನಿರ್ದಿಷ್ಟ ಆರೋಪಗಳನ್ನು ಮಾಡಿರುವ ಸಂದರ್ಭದಲ್ಲಿ ಗೃಹಹಿಂಸೆ ನಡೆದಿದೆಯೇ ಎಂಬುದನ್ನು ಸಾಕ್ಷ್ಯಾಧಾರಗಳ ಆಧಾರದ ಮೇಲೆ ವಿಚಾರಣಾ ನ್ಯಾಯಾಲಯವೇ ನಿರ್ಧರಿಸಬೇಕು ಎಂದು ತಿಳಿಸಿದೆ. ಮಹಿಳೆಯರ ರಕ್ಷಣೆಗಾಗಿ ರೂಪಿಸಿರುವ ಕಲ್ಯಾಣ ಕಾಯ್ದೆಯಡಿ ದಾಖಲಾದ ಪ್ರಕರಣವನ್ನು ಆರಂಭಿಕ ಹಂತದಲ್ಲೇ ರದ್ದುಗೊಳಿಸಲು ನ್ಯಾಯಾಲಯದ ಅಸಾಧಾರಣ ಅಧಿಕಾರ ಬಳಸಲಾಗದು ಎಂದು ಸ್ಪಷ್ಟಪಡಿಸಿದೆ.

ಸಬುಜ್ ಪಾಲ್ ಮತ್ತು ಅರ್ಪಿತಾ ಅವರು ವಿವಾಹದ ವೆಬ್‌ಸೈಟ್ ಮೂಲಕ ಪರಿಚಯವಾಗಿ 2013ರ ಡಿಸೆಂಬರ್ 6ರಂದು ಕೋಲ್ಕತ್ತಾದಲ್ಲಿ ವಿವಾಹವಾಗಿದ್ದರು. ಬಳಿಕ ದಂಪತಿ ಕೆನಡಾದ ಟೊರಾಂಟೋದಲ್ಲಿ ನೆಲೆಸಿದ್ದರು. 2016ರಲ್ಲಿ ಭಾರತಕ್ಕೆ ಮರಳಿದ ಪತ್ನಿಯನ್ನು ಪತಿ ಮತ್ತೆ ಕೆನಡಾಕ್ಕೆ ಕರೆದುಕೊಂಡು ಹೋಗಲಿಲ್ಲ ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ ಅರ್ಪಿತಾ ಅವರು 2017ರಲ್ಲಿ ಬೆಂಗಳೂರಿನ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯ ಸೆಕ್ಷನ್ 12ರ ಅಡಿ ರಕ್ಷಣೆ, ವಸತಿ ಸೌಲಭ್ಯ ಮತ್ತು ಪರಿಹಾರ ಕೋರಿ ಅರ್ಜಿ ಸಲ್ಲಿಸಿದ್ದರು.

ಪತ್ನಿ ಭಾರತಕ್ಕೆ ಮರಳಿದ ಬಳಿಕ ಒಂದು ವರ್ಷ ನಾಲ್ಕು ತಿಂಗಳು ಕಳೆದ ನಂತರ ದೂರು ದಾಖಲಿಸಿದ್ದಾರೆ. ಇದು ಕಾಲಮಿತಿಗೆ ವಿರುದ್ಧವಾಗಿದ್ದು, ತಾವು ವಿದೇಶದಲ್ಲಿದ್ದಾಗ ಗೃಹಹಿಂಸೆ ಎಸಗಿರುವ ಆರೋಪ ಸಮಂಜಸವಲ್ಲ ಎಂದು ಸಬುಜ್ ಪಾಲ್ ಪರ ವಕೀಲರು ವಾದಿಸಿದ್ದರು. ಆದರೆ, ಪತಿ ತಮ್ಮನ್ನು ಪ್ರತ್ಯೇಕವಾಗಿ ವಾಸಿಸುವಂತೆ ಹಾಗೂ ತಾಯಿ ಮನೆಗೆ ತೆರಳುವಂತೆ ಒತ್ತಾಯಿಸುತ್ತಿದ್ದರು ಎಂದು ಪತ್ನಿ ಪರ ವಕೀಲರು ಪ್ರತಿವಾದಿಸಿದ್ದರು. ಎರಡೂ ಕಡೆಯ ವಾದಗಳನ್ನು ಆಲಿಸಿದ ಹೈಕೋರ್ಟ್, ಆರೋಪಗಳ ಸತ್ಯಾಸತ್ಯತೆಯನ್ನು ವಿಚಾರಣೆಯಲ್ಲೇ ನಿರ್ಧರಿಸಬೇಕೆಂದು ಹೇಳಿ ಅರ್ಜಿ ವಜಾಗೊಳಿಸಿದೆ.



ಸಿಎಂ ಡಿ ಕೆ ಶಿವಕುಮಾರ್ ಅವರು ಬೆಳಗಾವಿಯ ಸರ್ಕಿಟ್ ಹೌಸ್ ಬಳಿ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮೆರವಣಿಗೆಗೆ ಸೋಮವಾರ ಚಾಲನೆ ನೀಡಿದರು. ಸಚಿವ ಸತೀಶ್ ಜಾರಕಿಹೊಳಿ, ಎಸ್ ಎಸ್ ಮಲ್ಲಿಕಾರ್ಜುನ, ವಿಧಾನಸಭೆ ಆಡಳಿತ ಪಕ್ಷದ ಮುಖ್ಯಸಚೇತಕರಾದ ಅಶೋಕ್ ಪಟ್ಟಣ್, ಶಾಸಕರಾದ ಲಕ್ಷ್ಮಿ ಹೆಬ್ಬಾಳ್ಕರ್, ಎನ್ ಎಚ್ ಕೋನರೆಡ್ಡಿ, ಆಸೀಫ್ ರಾಜು ಸೇಠ್, ಸಿ ಎಸ್ ನಾಡಗೌಡ, ಮಹಾಂತೇಶ್ ಕೌಜಲಗಿ, ಎಂಎಲ್ ಸಿ ಚನ್ನರಾಜ ಹಟ್ಟಿಹೊಳಿ ಮತ್ತಿತರರು ಉಪಸ್ಥಿತರಿದ್ದರು.

# ವಾಲ್ಮೀಕಿ ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸೋಣ: ಪರಮೇಶ್ವರ್

● ವಿಕ್ರಮ ವಾಹಿನಿ | ಬೆಂಗಳೂರು

ಆದಿಕವಿ ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳನ್ನು ಸ್ಮರಿಸಿ, ಮುಂದಿನ ಪೀಳಿಗೆಗೆ ತಲುಪಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಹೇಳಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ 2026ನೇ ಸಾಲಿನ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ರಾಮಾಯಣ ಮತ್ತು ಮಹಾಭಾರತ ಭಾರತದ ಸಾಂಸ್ಕೃತಿಕ ಹಾಗೂ ಧಾರ್ಮಿಕ ಪರಂಪರೆಯ ಪ್ರಮುಖ ಆಧಾರಸ್ತಂಭಗಳಾಗಿವೆ. ಸತ್ಯ ಮತ್ತು ಧರ್ಮದ ಮಾರ್ಗದಲ್ಲಿ ಸಮಾಜ ಮುನ್ನಡೆಯಬೇಕು ಎಂಬ ಸಂದೇಶವನ್ನು ಈ ಮಹಾಕಾವ್ಯಗಳು ಸಾರುತ್ತವೆ ಎಂದರು.

ಸಮಾಜದಲ್ಲಿನ ಜಾತಿ ಆಧಾರಿತ ತಾರತಮ್ಯ ಮತ್ತು ಅಸಮಾನತೆ ನಿವಾರಣೆಯಾಗಬೇಕು. ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಮೀಸಲಾತಿ ಕಲ್ಪಿಸಿ, ಶೋಷಿತ ಸಮುದಾಯಗಳಿಗೆ ರಾಜಕೀಯ, ಶೈಕ್ಷಣಿಕ, ಉದ್ಯೋಗ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸಲು ಅವಕಾಶ ನೀಡಿದ್ದಾರೆ. ಅಸಮಾನತೆಯಿಂದ ಹೊರಬರಲು ಶಿಕ್ಷಣ ಅತ್ಯಗತ್ಯವಾಗಿದ್ದು, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರು ಶೈಕ್ಷಣಿಕವಾಗಿ ಮತ್ತಷ್ಟು ಪ್ರಗತಿ ಸಾಧಿಸಬೇಕು ಎಂದು ತಿಳಿಸಿದರು.

**ಹತ್ತು ಸಾಧಕರಿಗೆ ವಾಲ್ಮೀಕಿ ಪ್ರಶಸ್ತಿ:** 2026ನೇ ಸಾಲಿನ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಭಾಜನರಾದ ಡಾ. ಚಂದ್ರನಾಯಕ, ಬಿ. ತಿಪ್ಪಣ್ಣ ಮರಿಕುಂಟೆ, ಬಿ.ಜಿ. ಕೃಷ್ಣಪ್ಪ, ಆರ್.ಎಂ. ಮುನಿರಾಜು, ಎನ್. ವೆಂಕಟರಾಮ, ಜೆ.ಪಿ. ರಾಜು, ಕೇತಮ್ಮ, ಶಿವನಗೌಡ ಹೊನ್ನನಗೌಡ ಪಾಟೀಲ, ಪ್ರೊ. ತೇಜಸ್ವಿ ಕಟ್ಟಿಮನಿ ಹಾಗೂ ನಂದಕುಮಾರ ಮಾಲಿ ಪಾಟೀಲ ಅವರಿಗೆ ತಲಾ 5 ಲಕ್ಷ ನಗದು ಬಹುಮಾನ ಮತ್ತು 25 ಗ್ರಾಂ ಚಿನ್ನದ ಪದಕ ನೀಡಿ ಗೌರವಿಸಲಾಯಿತು.

ರಾಜನಹಳ್ಳಿ ಶ್ರೀ ಮಹರ್ಷಿ ವಾಲ್ಮೀಕಿ ಜಗದ್ಗುರು ಡಾ. ಶ್ರೀ ಶ್ರೀ ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮೀಜಿ ಆಶೀರ್ವಚನ ನೀಡಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಡಿಯೋ ಸಂದೇಶದ ಮೂಲಕ ಜಯಂತಿಯ ಶುಭಾಶಯ ತಿಳಿಸಿ, ವಾಲ್ಮೀಕಿ ಅವರ ಆದರ್ಶಗಳನ್ನು ಉಳಿಸಿ ಬೆಳೆಸಿಕೊಂಡು ಹೋಗುವುದು ಎಲ್ಲರ ಕರ್ತವ್ಯ ಎಂದು ಹೇಳಿದರು.

ಮಾಜಿ ಸಚಿವ ಎಚ್. ಆಂಜನೇಯ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಎಂ. ಕನಗವಲ್ಲಿ, ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷ ಜಿ.ಟಿ. ಚಂದ್ರಶೇಖರಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಮೀಸಲಾತಿ ಹೆಚ್ಚಳ: ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೀಸಲಾತಿಯನ್ನು ಶೇ. 50ರಿಂದ ಶೇ. 56ಕ್ಕೆ ಹೆಚ್ಚಿಸುವ ಸಂಬಂಧದ ಹೈಕೋರ್ಟ್ ತೀರ್ಪಿನ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ. ತಮಿಳುನಾಡಿನಲ್ಲಿ ಶೇ. 69ರಷ್ಟು ಮೀಸಲಾತಿ ಜಾರಿಯಲ್ಲಿರುವಾಗ ಕರ್ನಾಟಕದ ಮೀಸಲಾತಿ ಹೆಚ್ಚಳದ ವಿಚಾರದಲ್ಲಿ ಎದುರಾಗಿರುವ ತಡೆಯ ಬಗ್ಗೆ ಸರ್ಕಾರ ಚರ್ಚಿಸಿದ್ದು, ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ನಿರ್ಧರಿಸಿದೆ. ಶೀಘ್ರದಲ್ಲೇ ಕಾನೂನು ಹೋರಾಟ ಮುಂದುವರಿಸಲಾಗುವುದು ಎಂದು ಪರಮೇಶ್ವರ ಹೇಳಿದರು.

ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಟಿ. ರಘುಮೂರ್ತಿ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ರಾಮಾಯಣದ ಮೂಲಕ ದೇಶಕ್ಕೆ ಮಾತ್ರವಲ್ಲ, ಇಡೀ ಜಗತ್ತಿಗೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ವಾಲ್ಮೀಕಿ ಸಮುದಾಯದ ಅಭಿವೃದ್ಧಿಗೆ ಸರ್ಕಾರ ರೂಪಿಸಿರುವ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಪರಿಣಾಮಕಾರಿಯಾಗಿ ತಲುಪಬೇಕು ಎಂದರು. ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ಮಾತನಾಡಿ, ವಾಲ್ಮೀಕಿ, ಬುದ್ಧ, ಬಸವಣ್ಣ, ಮಹಾತ್ಮ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಂ ಅವರ ತತ್ವಗಳ ಆಧಾರದಲ್ಲಿ ಸಮಾಜ ಸೇವೆ ಮಾಡುವುದು ಸರ್ಕಾರದ ಉದ್ದೇಶವಾಗಿದೆ ಎಂದರು. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿದ್ಯಾರ್ಥಿಗಳಿಗಾಗಿ ವಸತಿ ಶಾಲೆ, ವಿದ್ಯಾರ್ಥಿನಿಲಯ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ. ಶೇ. 60ಕ್ಕಿಂತ ಹೆಚ್ಚು ಅಂಕ ಗಳಿಸುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ರಿಜ್ವಾನ್ ಅರ್ಷದ್ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ರಾಮಾಯಣದ ಮೂಲಕ ಜಗತ್ತಿಗೆ ಭಾರತದ ಸಾಹಿತ್ಯ ಪರಂಪರೆಯನ್ನು ಪರಿಚಯಿಸಿದ್ದಾರೆ. ಸಾಮಾನ್ಯ ಹಿನ್ನೆಲೆಯಿಂದ ಬಂದವರೂ ತಮ್ಮ ಸಾಧನೆ ಮತ್ತು ಸಾಹಿತ್ಯದ ಮೂಲಕ ಜಗತ್ತನ್ನು ಬದಲಿಸಬಹುದು ಎಂಬುದನ್ನು ಅವರು ತೋರಿಸಿಕೊಟ್ಟಿದ್ದಾರೆ ಎಂದರು.



# ರೈತರ ಮುಂದಿನ ನಡೆ ಏನು?

1ನೇ ಪುಟದಿಂದ

ಇದರಿಂದ ಕಬ್ಬಿನ ದರ ನಿಗದಿಯ ನಿರೀಕ್ಷೆಯಲ್ಲಿದ್ದ ರೈತರಿಗೆ ನಿರಾಸೆಯಾಗಿದೆ.

ಸಭೆಯಲ್ಲಿ ಕಬ್ಬಿನ ಬೆಲೆ ನಿಗದಿ ಸೇರಿದಂತೆ ವಿವಿಧ ಬೇಡಿಕೆಗಳ ಕುರಿತು ಸುಮಾರು ಎರಡು ಗಂಟೆಗಳ ಕಾಲ ಸುದೀರ್ಘ ಚರ್ಚೆ ನಡೆಯಿತು. ಆದರೆ, ರೈತರ ಬೇಡಿಕೆಗಳ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಲು ಸಾಧ್ಯವಾಗಲಿಲ್ಲ ಎಂದು ತಿಳಿದುಬಂದಿದೆ.

ಬೇಡಿಕೆಗಳ ಕುರಿತು ಸೂಕ್ತ ನಿರ್ಧಾರ ಕೈಗೊಳ್ಳಲು ಸರ್ಕಾರಕ್ಕೆ ಇನ್ನಷ್ಟು ಕಾಲಾವಕಾಶ ನೀಡುವಂತೆ ಮುಖ್ಯಮಂತ್ರಿ ರೈತರಲ್ಲಿ ಮನವಿ ಮಾಡಿದ್ದಾರೆ. ಆದರೆ, ಪದೇಪದೇ ಕಾಲಾವಕಾಶ ನೀಡಲು ರೈತರು ಸಮ್ಮತಿಸುತ್ತಿಲ್ಲ ಎನ್ನಲಾಗಿದೆ.

ಸಭೆಯಿಂದ ಕಬ್ಬಿನ ದರದ ಕುರಿತು ಮಹತ್ವದ ಘೋಷಣೆ ಹೊರಬೀಳಲಿದೆ ಎಂಬ ನಿರೀಕ್ಷೆಯಲ್ಲಿದ್ದ ಬೆಳೆಗಾರರಿಗೆ ನಿರಾಸೆಯಾಗಿದೆ. ಇದೀಗ ಸರ್ಕಾರಕ್ಕೆ ಮತ್ತಷ್ಟು ಕಾಲಾವಕಾಶ ನೀಡಲು ರೈತರು ಒಪ್ಪುತ್ತಾರೆಯೇ ಅಥವಾ ತಮ್ಮ ಹೋರಾಟವನ್ನು ತೀವ್ರಗೊಳಿಸುತ್ತಾರೆಯೇ ಎಂಬುದು ಕುತೂಹಲ ಮೂಡಿಸಿದೆ.

# ಕಬ್ಬು ಬೆಳೆಗಾರರ ಸಮಸ್ಯೆ: ಕೇಂದ್ರದ ಹೊಣೆ ಹೆಚ್ಚು

1ನೇ ಪುಟದಿಂದ

ಮೈಸೂರು, ಮಧ್ಯ ಕರ್ನಾಟಕ, ಬೆಳಗಾವಿ, ರಾಯಚೂರು, ಹುಬ್ಬಳ್ಳಿ ಹಾಗೂ ಧಾರವಾಡ ಸೇರಿದಂತೆ ವಿವಿಧ ಭಾಗಗಳ ಕಬ್ಬು ಬೆಳೆಗಾರರ ಸಮಸ್ಯೆಗಳ ಕುರಿತು ಚರ್ಚಿಸಲಾಗುವುದು. ರೈತರ ಹಿತಾಸಕ್ತಿ ಕಾಪಾಡುವುದು ಸರ್ಕಾರದ ಕರ್ತವ್ಯ. ಅದೇ ರೀತಿ ಸಕ್ಕರೆ ಕಾರ್ಖಾನೆಗಳ ಮಾಲೀಕರ ಬೇಡಿಕೆಗಳನ್ನೂ ಆಲಿಸಬೇಕಿದೆ. ಎಲ್ಲರ ಅಭಿಪ್ರಾಯಗಳನ್ನು ಪಡೆದ ಬಳಿಕ ಮುಂದಿನ ಕ್ರಮಗಳ ಬಗ್ಗೆ ನಿರ್ಧರಿಸಲಾಗುವುದು ಎಂದರು.

**ಟನ್‌ಗೆ ರೂ 250 ಹೆಚ್ಚುವರಿ ಪಾವತಿ ಬಾಕಿ**

ಈ ಹಿಂದೆ ಸಕ್ಕರೆ ಕಾರ್ಖಾನೆಗಳ ವಿರೋಧದ ನಡುವೆಯೂ ಪ್ರತಿ ಟನ್ ಕಬ್ಬಿಗೆ ಹೆಚ್ಚುವರಿಯಾಗಿ ರೂ 250 ಪಾವತಿಸುವಂತೆ ಸರ್ಕಾರ ಆದೇಶಿಸಿತ್ತು. ರಾಜ್ಯ ಸರ್ಕಾರವೂ ಪ್ರತಿ ಟನ್‌ಗೆ ರೂ 50 ನೀಡಿತ್ತು. ಆದರೆ, ಹಲವು ಕಾರ್ಖಾನೆಗಳು ಸರ್ಕಾರದ ಸೂಚನೆಯಂತೆ ರೂ 250 ಹೆಚ್ಚುವರಿ ಮೊತ್ತ ಪಾವತಿಸಿಲ್ಲ ಎಂಬುದು ಗಮನಕ್ಕೆ ಬಂದಿದೆ. ಈ ವಿಚಾರವನ್ನೂ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಹೇಳಿದರು.

ಕಬ್ಬು ಬೆಳೆಗಾರರ ಸಮಸ್ಯೆ ಪರಿಹರಿಸಲು ಕೇಂದ್ರ ಸರ್ಕಾರವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಅನಿವಾರ್ಯ. ಈ ವಿಚಾರದಲ್ಲಿ ರಾಜ್ಯದ ಪಾಲು ಶೇ.10ರಷ್ಟಿದ್ದರೆ, ಕೇಂದ್ರದ ಪಾಲು ಶೇ.90ರಷ್ಟಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಉತ್ಪಾದನೆಯಾಗುವ ಎಥೆನಾಲ್ ಅನ್ನು ಕೇಂದ್ರ ಸರ್ಕಾರ ಸಂಪೂರ್ಣವಾಗಿ ಖರೀದಿಸಬೇಕು ಎಂಬ ಬೇಡಿಕೆಯ ಬಗ್ಗೆಯೂ ಚರ್ಚೆ ನಡೆಸಲಾಗುವುದು ಎಂದರು.

ಇದೇ ವೇಳೆ, ಸ್ಟಿಂಗ್ ಆಪರೇಷನ್ ವಿಚಾರವಾಗಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಗಳ ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿದ ಡಿ.ಕೆ.ಶಿವಕುಮಾರ್ ಅಲ್ಲಿಂದ ನಿರ್ಗಮಿಸಿದರು.

# ಕಬ್ಬಿನ ದರಕ್ಕೆ ರೈತ ಮುಖಂಡರ ಕಿತ್ತಾಟ

1ನೇ ಪುಟದಿಂದ

ಈ ವೇಳೆ ಸ್ಪಷ್ಟನೆ ನೀಡಿದ ಚೂನಪ್ಪ ಪೂಜಾರಿ, ಕಾರ್ಖಾನೆಗಳಿಂದ ರೂ 4,500 ಹಾಗೂ ರಾಜ್ಯ ಸರ್ಕಾರದಿಂದ ರೂ 1,000 ಪ್ರೋತ್ಸಾಹಧನ ಸೇರಿ ಒಟ್ಟು ರೂ 5,500 ನೀಡಬೇಕೆಂಬುದು ತಮ್ಮ ಬೇಡಿಕೆ ಎಂದು ತಿಳಿಸಲು ಪ್ರಯತ್ನಿಸಿದರು. ಆದರೆ, ಎರಡೂ ಬಣಗಳ ನಡುವೆ ವಾಗ್ವಾದ ಮುಂದುವರಿದು, ಮೈಕ್ ಕಸಿದುಕೊಳ್ಳುವ ಹಂತಕ್ಕೆ ತಲುಪಿತು.

ಗದ್ದಲ ತೀವ್ರಗೊಂಡಾಗ ಚೂನಪ್ಪ ಪೂಜಾರಿ ಬಣದ ಕೆಲ ಕಾರ್ಯಕರ್ತರು ನೀರಿನ ಗಾಜಿನ ಲೋಟಗಳನ್ನು ಎದುರಾಳಿ ಬಣದವರತ್ತ ಎಸೆದಿದ್ದಾರೆ ಎನ್ನಲಾಗಿದೆ. ಈ ವೇಳೆ ಗಾಜಿನ ತುಂಡು ತಗುಲಿ ಇಬ್ಬರು ಗಾಯಗೊಂಡರು. ಸಭಾಂಗಣದಲ್ಲಿ ತಳ್ಳಾಟ, ನೂಕಾಟವೂ ನಡೆಯಿತು. ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ಮುಖಂಡರನ್ನು ಸಮಾಧಾನಪಡಿಸಲು ಪ್ರಯತ್ನಿಸಿದರೂ ಗಲಾಟೆ ತಕ್ಷಣಕ್ಕೆ ನಿಲ್ಲಲಿಲ್ಲ.

ಕೊನೆಗೆ ಪೊಲೀಸರು ಮಧ್ಯಪ್ರವೇಶಿಸಿ ಗಲಾಟೆಯಲ್ಲಿ ತೊಡಗಿದ್ದವರನ್ನು ಸಭಾಂಗಣದಿಂದ ಹೊರಗೆ ಕರೆದೊಯ್ದು ಪರಿಸ್ಥಿತಿಯನ್ನು ಹತೋಟಿಗೆ ತಂದರು. ಕಬ್ಬಿನ ಬೆಲೆ ನಿಗದಿ ಕುರಿತು ರೈತರು ಮತ್ತು ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ ಚರ್ಚೆ ನಡೆಸಬೇಕಿದ್ದ ಸಭೆಗೆ ಮುನ್ನವೇ ರೈತ ಮುಖಂಡರ ನಡುವೆ ಸಂಘರ್ಷ ನಡೆದಿರುವುದು ಗಮನ ಸೆಳೆಯಿತು.

# ರೂ 100 ಕೋಟಿ ಶಾಲಾ ಹಗರಣ: ಮಾಜಿ ಸಚಿವ ಬಂಧನ

1ನೇ ಪುಟದಿಂದ

2021ರಿಂದ 2026ರವರೆಗೆ ಶಾಲಾ ಶಿಕ್ಷಣ ಸಚಿವರಾಗಿದ್ದ ಅವಧಿಯಲ್ಲಿ ಶಾಶ್ವತ ಮಾನ್ಯತೆ ಮತ್ತು ಇತರ ಅನುಮೋದನೆಗಳನ್ನು ನೀಡಲು ಪಕ್ಷದ ನಿಧಿಯ ಹೆಸರಿನಲ್ಲಿ 1,000ಕ್ಕೂ ಹೆಚ್ಚು ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳಿಂದ ಹಣ ಪಡೆದಿದ್ದಾರೆ ಎಂಬುದು ಅವರ ವಿರುದ್ಧದ ಆರೋಪ.

ಈ ಸಂಬಂಧ ಸಿಸಿಬಿ ಭ್ರಷ್ಟಾಚಾರ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯವೂ (ಇ.ಡಿ.) ಅಕ್ರಮ ಹಣ ವರ್ಗಾವಣೆ ಸೇರಿದಂತೆ ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿದೆ.

ತನಿಖೆಯ ಭಾಗವಾಗಿ ನಡೆಸಿದ ದಾಳಿಗಳ ವೇಳೆ ಆಸ್ತಿ ದಾಖಲೆಗಳು, ಬ್ಯಾಂಕ್ ವಹಿವಾಟಿನ ವಿವರಗಳು, 18 ಮೊಬೈಲ್ ಫೋನ್‌ಗಳು, ಲ್ಯಾಪ್‌ಟಾಪ್‌ಗಳು ಮತ್ತು ಟ್ಯಾಬ್ಲೆಟ್‌ಗಳು ಸೇರಿದಂತೆ ಒಟ್ಟು 118 ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ವರದಿಯಾಗಿದೆ.

ಖಾಸಗಿ ಶಾಲೆಗಳ ಸಂಘದ ದೂರಿನ ಹಿನ್ನೆಲೆಯಲ್ಲಿ ತನಿಖೆ ಆರಂಭವಾಗಿದ್ದು, ಜೂನ್‌ನಲ್ಲಿ ಬಿ.ಟಿ. ಅರಸಕುಮಾರ್ ಸೇರಿದಂತೆ ಮೂವರನ್ನು ಪೊಲೀಸರು ಬಂಧಿಸಿದ್ದರು.

ತಮ್ಮ ವಿರುದ್ಧದ ಆರೋಪಗಳನ್ನು ಅನ್ಬಿಲ್ ಮಹೇಶ್ ನಿರಾಕರಿಸಿದ್ದು, ಇದು ರಾಜಕೀಯ ದ್ವೇಷದಿಂದ ಕೈಗೊಂಡ ಕ್ರಮ ಎಂದು ಆರೋಪಿಸಿದ್ದಾರೆ.

ರಾಜ್ಯ ಸರ್ಕಾರದ ಹೊಸ ಸಚಿವಾಲಯ ಮತ್ತು ವಿಧಾನಸಭಾ ಸಂಕೀರ್ಣ ನಿರ್ಮಾಣ ಯೋಜನೆಯನ್ನು ಟೀಕಿಸಿದ ಬಳಿಕ ತಮ್ಮ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ. ಆರೋಪಗಳ ಕುರಿತು ತನಿಖೆ ಮುಂದುವರಿದಿದೆ.

# ತಮಿಳುನಾಡಿನಲ್ಲಿ ಭಾರಿ ಮಳೆ: ಸಿಡಿಲಿಗೆ 14 ಬಲಿ

1ನೇ ಪುಟದಿಂದ

ಮುನ್ನೆಚ್ಚರಿಕೆ ಕ್ರಮವಾಗಿ ಊಟಿ ಮತ್ತು ಕೊಡೈಕೆನಾಲ್‌ನಂತಹ ಗಿರಿಧಾಮಗಳಿಗೆ ಪ್ರವಾಸಿಗರ ಪ್ರವೇಶವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ. ವಿಪತ್ತು ನಿರ್ವಹಣಾ ಪಡೆ, ಅಗ್ನಿಶಾಮಕ ದಳ ಹಾಗೂ ಕಂದಾಯ ಇಲಾಖೆ ಸಿಬ್ಬಂದಿ ಪರಿಹಾರ ಕಾರ್ಯಗಳಲ್ಲಿ ತೊಡಗಿದ್ದಾರೆ.

ಮಳೆಯಿಂದ ಒಂದೇ ದಿನದಲ್ಲಿ 35 ಮಂದಿ ಮೃತಪಟ್ಟಿದ್ದಾರೆ ಎಂಬ ಸಾಮಾಜಿಕ ಜಾಲತಾಣಗಳ ವರದಿಯನ್ನು ಸಚಿವರು ತಳ್ಳಿಹಾಕಿದ್ದು, ಸಾರ್ವಜನಿಕರು ಅಧಿಕೃತ ಮಾಹಿತಿಯನ್ನಷ್ಟೇ ನಂಬುವಂತೆ ಮನವಿ ಮಾಡಿದ್ದಾರೆ. ಮಳೆ ಮುಂದುವರಿಯುವ ಸಾಧ್ಯತೆಯಿರುವುದರಿಂದ ಅಪಾಯದ ಪ್ರದೇಶಗಳ ಜನರು ಎಚ್ಚರಿಕೆ ವಹಿಸಿ ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆಯುವಂತೆ ಜಿಲ್ಲಾಡಳಿತ ಸೂಚಿಸಿದೆ.

ವಿದ್ಯುತ್ ಕಂಬಗಳು, ಮರಗಳು ಮತ್ತು ದುರ್ಬಲ ಕಟ್ಟಡಗಳ ಸಮೀಪ ನಿಲ್ಲದಂತೆ ಹಾಗೂ ಅನಿವಾರ್ಯವಲ್ಲದ ಪ್ರಯಾಣವನ್ನು ಮುಂದೂಡುವಂತೆ ಮನವಿ ಮಾಡಲಾಗಿದೆ. ತುರ್ತು ಪರಿಸ್ಥಿತಿಯಲ್ಲಿ ತಕ್ಷಣ ರಕ್ಷಣಾ ಸಿಬ್ಬಂದಿಯನ್ನು ಸಂಪರ್ಕಿಸುವಂತೆ ಜಿಲ್ಲಾಡಳಿತ ತಿಳಿಸಿದೆ.

# ಗೃಹಜ್ಯೋತಿ ಸಮೀಕ್ಷೆಗೆ 31 ಕೊನೆಯ ದಿನ

● ವಿಕ್ರಮ ವಾಹಿನಿ । ಬೆಂಗಳೂರು

ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಮನೆ-ಮನೆ ಸಮೀಕ್ಷೆಗೆ ಅಕ್ಟೋಬರ್ 31 ಕೊನೆಯ ದಿನವಾಗಿದ್ದು, ಗಡುವು ವಿಸ್ತರಿಸುವುದಿಲ್ಲ ಎಂದು ಬೆಸ್ಕಾಂ ಸ್ಪಷ್ಟಪಡಿಸಿದೆ. ಸಮೀಕ್ಷೆಯಲ್ಲಿ ಪಾಲ್ಗೊಳ್ಳದ ಹಾಗೂ ಮನೆಗೆ ಬೀಗ ಹಾಕಿದ್ದರಿಂದ ಸಮೀಕ್ಷೆಗೆ ಒಳಪಡದ ಗ್ರಾಹಕರು ನಿಗದಿತ ಅವಧಿಯೊಳಗೆ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಮನವಿ ಮಾಡಿದೆ.

ಬೆಸ್ಕಾಂ ವ್ಯಾಪ್ತಿಯಲ್ಲಿ ಕಳೆದ ಮೂರೂವರೆ ತಿಂಗಳಿನಿಂದ ನಡೆಯುತ್ತಿರುವ ಸಮೀಕ್ಷೆ ಬಹುತೇಕ ಪೂರ್ಣಗೊಂಡಿದೆ. ಅಕ್ಟೋಬರ್ 22ರ ವೇಳೆಗೆ ಶೇ.98.49ರಷ್ಟು ಪ್ರಗತಿ ಸಾಧಿಸಲಾಗಿದೆ. ಒಟ್ಟು 74,29,773 ಫಲಾನುಭವಿಗಳ ಪೈಕಿ 73,17,687 ಗ್ರಾಹಕರ ಸಮೀಕ್ಷೆ ಪೂರ್ಣಗೊಂಡಿದೆ. ಉಳಿದ ಗ್ರಾಹಕರನ್ನು ತಲುಪಲು ಬೆಸ್ಕಾಂ ಪ್ರಯತ್ನಿಸುತ್ತಿದ್ದು, ಸಮೀಕ್ಷೆಯಿಂದ ಹೊರಗುಳಿದವರಿಗೆ ಅಕ್ಟೋಬರ್ 31ರವರೆಗೆ ದಾಖಲೆ ಸಲ್ಲಿಸಲು ಅವಕಾಶ ನೀಡಲಾಗಿದೆ.

**ಮೂರು ಬಾರಿ ಭೇಟಿ, ಮೊಬೈಲ್‌ಗೆ ಸಂದೇಶ:** ಬೆಸ್ಕಾಂ ವ್ಯಾಪ್ತಿಯ ಎಂಟು ಜಿಲ್ಲೆಗಳಲ್ಲಿ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಜತೆಗೆ ಭಾಗ್ಯಜ್ಯೋತಿ, ಕುಟೀರಜ್ಯೋತಿ ಹಾಗೂ ಅಮೃತಜ್ಯೋತಿ ಯೋಜನೆಗಳ ಗ್ರಾಹಕರನ್ನೂ ಸಮೀಕ್ಷೆಗೆ ಒಳಪಡಿಸಲಾಗುತ್ತಿದೆ. ಮನೆಗೆ ಬೀಗ ಹಾಕಿರುವುದು, ಮನೆ ಖಾಲಿ ಇರುವುದು ಸೇರಿದಂತೆ ವಿವಿಧ ಕಾರಣಗಳಿಂದ ಕೆಲವು ಗ್ರಾಹಕರು ಲಭ್ಯವಾಗಿಲ್ಲ.

ಇಂತಹ ಮನೆಗಳಿಗೆ ಬೆಸ್ಕಾಂ ಸಿಬ್ಬಂದಿ ಮೂರು ಬಾರಿ ಭೇಟಿ ನೀಡಿದ್ದಾರೆ. ಅಲ್ಲದೆ, ಸಮೀಕ್ಷೆಯಲ್ಲಿ ಪಾಲ್ಗೊಳ್ಳುವಂತೆ ಸಂಬಂಧಪಟ್ಟ ಗ್ರಾಹಕರ ಮೊಬೈಲ್‌ಗಳಿಗೆ ಸಂದೇಶವನ್ನೂ ಕಳುಹಿಸಲಾಗಿದೆ. ಆದರೂ ಸಮೀಕ್ಷೆಗೆ ಒಳಪಡದ ಗ್ರಾಹಕರು ಕೂಡಲೇ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು ಎಂದು ಇಲಾಖೆ ಸೂಚಿಸಿದೆ.

**ಉಪವಿಭಾಗ ಕಚೇರಿಯಲ್ಲಿ ದಾಖಲೆ ಸಲ್ಲಿಸಿ:** ಸಮೀಕ್ಷೆ ವೇಳೆ ಮನೆಯಲ್ಲಿ ಲಭ್ಯವಿರದ ಅಥವಾ ಮನೆಗೆ ಬೀಗ ಹಾಕಿದ್ದ ಗ್ರಾಹಕರು ತಮ್ಮ ವ್ಯಾಪ್ತಿಯ ಬೆಸ್ಕಾಂ ಉಪವಿಭಾಗ ಕಚೇರಿಗೆ ಖುದ್ದಾಗಿ ತೆರಳಿ ಅಗತ್ಯ ದಾಖಲೆಗಳನ್ನು ಸಲ್ಲಿಸಬಹುದು. ಅಕ್ಟೋಬರ್ 31ರೊಳಗೆ ಈ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಬೆಸ್ಕಾಂ ಮನವಿ ಮಾಡಿದೆ.

ಗಡುವಿನೊಳಗೆ ದಾಖಲೆ ಸಲ್ಲಿಸದಿದ್ದರೆ ಸಮೀಕ್ಷೆಯಲ್ಲಿ ಪಾಲ್ಗೊಳ್ಳುವ ಅವಕಾಶ ತಪ್ಪುವ ಸಾಧ್ಯತೆ ಇರುವುದರಿಂದ ಗ್ರಾಹಕರು ನಿರ್ಲಕ್ಷ್ಯ ವಹಿಸಬಾರದು. ಕೊನೆಯ ದಿನದವರೆಗೆ ಕಾಯದೆ ಆದಷ್ಟು ಬೇಗ ದಾಖಲೆ ಸಲ್ಲಿಸುವಂತೆ ಬೆಸ್ಕಾಂ ತಿಳಿಸಿದೆ.

# ಫೀನಿಕ್ಸ್‌ನಲ್ಲಿ ಶ್ರೀ ವೆಂಕಟಕೃಷ್ಣ ಕ್ಷೇತ್ರದ ನೂತನ ದೇವಾಲಯಕ್ಕೆ ಶಿಲಾನ್ಯಾಸ

**ಅಮೆರಿಕದ ಫೀನಿಕ್ಸ್‌ನಲ್ಲಿ 15 ಮಿಲಿಯನ್ ಡಾಲರ್ ವೆಚ್ಚದಲ್ಲಿ ನಾಲ್ಕು ಎಕರೆ ಪ್ರದೇಶದಲ್ಲಿ ನಿರ್ಮಾಣವಾಗಲಿರುವ ಶ್ರೀ ವೆಂಕಟಕೃಷ್ಣ ಕ್ಷೇತ್ರದ ನೂತನ ದೇವಾಲಯಕ್ಕೆ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಶಿಲಾನ್ಯಾಸ ನೆರವೇರಿಸಿದರು.**

● ವಿಕ್ರಮ ವಾಹಿನಿ । ಫೀನಿಕ್ಸ್

ಅಮೆರಿಕದ ಫೀನಿಕ್ಸ್‌ನಲ್ಲಿರುವ ಶ್ರೀ ಪುತ್ತಿಗೆ ಮಠದ ಮೊದಲ ಶಾಖೆಯಾದ ಶ್ರೀ ವೆಂಕಟಕೃಷ್ಣ ಕ್ಷೇತ್ರದಲ್ಲಿ ನೂತನ ದೇವಾಲಯ ಸಂಕೀರ್ಣ ನಿರ್ಮಾಣಕ್ಕೆ ಭಾನುವಾರ ಶಿಲಾನ್ಯಾಸ ನೆರವೇರಿತು. ಸುಮಾರು 15 ಮಿಲಿಯನ್ ಡಾಲರ್ ವೆಚ್ಚದಲ್ಲಿ ನಾಲ್ಕು ಎಕರೆ ವಿಶಾಲ ಪ್ರದೇಶದಲ್ಲಿ ನಿರ್ಮಾಣವಾಗಲಿರುವ ದೇವಾಲಯಕ್ಕೆ ಪರಮಪೂಜ್ಯ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಶರದ್‌ಪೂರ್ಣಿಮೆಯ ಶುಭ ಸಂದರ್ಭದಲ್ಲಿ ಬೆಳಿಗ್ಗೆ 8.15ರ ಸುಮಾರಿಗೆ ಭೂಮಿಪೂಜೆ ನೆರವೇರಿಸಿ ಶಿಲಾನ್ಯಾಸ ಮಾಡಿದರು.

ಪುತ್ತಿಗೆ ಮಠದ ರಾಘವೇಂದ್ರ ಭಟ್ಟ ಕೊಡಂಚ ಅವರು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು. ಶ್ರೀನಿವಾಸ ದೇವರ ಉತ್ಸವಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ಭಕ್ತರ ಜಯಘೋಷ, ಶ್ರೀನಿವಾಸ ನಾಮಸಂಕೀರ್ತನೆ ಹಾಗೂ



ಮಂಗಳವಾದ್ಯಗಳ ನಡುವೆ ಶ್ರೀಪಾದರು ಶಿಲಾಕಲ್ಲು ಇರಿಸಿ ದೇವಾಲಯ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಿದರು. ಭೂಮಿಪೂಜೆಯ ಅಂಗವಾಗಿ ಭಕ್ತರು ನಾಣ್ಯಗಳು ಹಾಗೂ ಮುತ್ತು-ರತ್ನಗಳನ್ನು ಸಮರ್ಪಿಸಿದರು.

**ಭಕ್ತಿ, ನೆಮ್ಮದಿಯ ಕೇಂದ್ರವಾಗಲಿದೆ:** ಅನುಗ್ರಹ ಸಂದೇಶ ನೀಡಿದ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು, ಫೀನಿಕ್ಸ್‌ನ ನೂತನ ದೇವಾಲಯವು ಪಾರಂಪರಿಕ ವಾಸ್ತುಶಿಲ್ಪದ ಸೊಬಗಿನಿಂದ ಕೂಡಿದ ಸುಂದರ ಧಾರ್ಮಿಕ ಕ್ಷೇತ್ರವಾಗಿ ರೂಪುಗೊಳ್ಳಲಿದೆ ಎಂದು ಹೇಳಿದರು. ಉಡುಪಿಯ ಶ್ರೀಕೃಷ್ಣನ ಸಾನ್ನಿಧ್ಯ ಹಾಗೂ ಪರ್ವತದ ಮೇಲಿರುವ ಶ್ರೀವೆಂಕಟೇಶ್ವರನ ಭವ್ಯತೆಯನ್ನು ನೆನಪಿಸುವ ಶ್ರೀ ವೆಂಕಟಕೃಷ್ಣನ ದಿವ್ಯ ಸಾನ್ನಿಧ್ಯವು ಭಕ್ತರಿಗೆ ಭಕ್ತಿ, ಆಧ್ಯಾತ್ಮಿಕ ಅನುಭವ ಮತ್ತು ನೆಮ್ಮದಿಯನ್ನು ನೀಡಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಪುತ್ತಿಗೆ ಮಠದ ದಿವಾನ ನಾಗರಾಜ ಆಚಾರ್ಯರು, ಅಂತರರಾಷ್ಟ್ರೀಯ ಕಾರ್ಯದರ್ಶಿ ಪ್ರಸನ್ನ ಆಚಾರ್ಯರು, ಕ್ಷೇತ್ರದ ಪ್ರಧಾನ ಅರ್ಚಕ ಕಿರಣ ಆಚಾರ್ಯರು ಸೇರಿದಂತೆ ಹಲವು ಭಕ್ತರು ಹಾಗೂ ದಾನಿಗಳು ಉಪಸ್ಥಿತರಿದ್ದರು. 300ಕ್ಕೂ ಹೆಚ್ಚು ಭಕ್ತರು ಶಿಲಾನ್ಯಾಸ ಸಮಾರಂಭದಲ್ಲಿ ಭಾಗವಹಿಸಿದರು.

# ಖರ್ಗೆ ಹೇಳಿಕೆ ಸೈದ್ಧಾಂತಿಕ ವಿಮರ್ಶೆಯಷ್ಟೇ: ಹರಿಪ್ರಸಾದ್

● ವಿಕ್ರಮ ವಾಹಿನಿ । ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರ ತಂದೆಯ ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿರುವ ಹೇಳಿಕೆ ವೈಯಕ್ತಿಕ ಟೀಕೆಯಲ್ಲ, ಅದೊಂದು ಸೈದ್ಧಾಂತಿಕ ವಿಮರ್ಶೆಯಷ್ಟೇ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಸಮರ್ಥಿಸಿಕೊಂಡಿದ್ದಾರೆ.

ಇದೇ ವೇಳೆ, ಕೇಂದ್ರ ಸರ್ಕಾರದ ವಿರುದ್ಧ ರಾಜ್ಯಾದ್ಯಂತ ಬೃಹತ್ ಹೋರಾಟ ನಡೆಸುವುದಾಗಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಮತ್ತು ಆರ್‌ಎಸ್‌ಎಸ್‌ನವರು ಭಾರತವನ್ನು 'ಪಿತೃಭೂಮಿ, ಪುಣ್ಯಭೂಮಿ' ಎಂದು ಕರೆಯುತ್ತಾರೆ. ಇದೇ ಹಿನ್ನೆಲೆಯಲ್ಲಿ ಖರ್ಗೆ ಪ್ರತಿಕ್ರಿಯಿಸಿದ್ದು, ಅವರ ಹೇಳಿಕೆಯಲ್ಲಿ ಯಾವುದೇ ಅವಹೇಳನ ಅಥವಾ ವೈಯಕ್ತಿಕ ನಿಂದನೆಯಿಲ್ಲ ಎಂದು ಸ್ಪಷ್ಟಪಡಿಸಿದರು.

ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ಹರಿಪ್ರಸಾದ್, ಕಾಂಗ್ರೆಸ್ ನಾಯಕರ ವಿರುದ್ಧ ಈ ಹಿಂದೆ ಬಿಜೆಪಿ ನಾಯಕರು ವೈಯಕ್ತಿಕ ಟೀಕೆಗಳನ್ನು ಮಾಡಿದ್ದಾರೆ. ಟೆಲಿಪ್ರಾಂಪ್ಟರ್ ನೆರವಿಲ್ಲದೆ ಮಾತನಾಡಿದಾಗ ಪ್ರಧಾನಿ ಮೋದಿ ಅವರಿಂದ ವಿವಾದಾತ್ಮಕ ಹೇಳಿಕೆಗಳು ಹೊರಬರುತ್ತವೆ ಎಂದು ಆರೋಪಿಸಿದರು. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಕುರಿತು ಸಂಸತ್ತಿನಲ್ಲಿ ಮಾತನಾಡಿರುವ ಬಿಜೆಪಿ ನಾಯಕರ ವಿರುದ್ಧವೂ ಕಿಡಿಕಾರಿದರು.

## ನ. 5ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ



ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆಯುತ್ತಿರುವ ಹೋರಾಟದ ಮುಂದುವರಿದ ಭಾಗವಾಗಿ ನವೆಂಬರ್ 5ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ಆಯೋಜಿಸಲಾಗಿದೆ. ಸಿದ್ಧತಾ ಸಭೆಗಳು ಈಗಾಗಲೇ ನಡೆದಿದ್ದು, ಸಿಪಿಐ, ಸಿಪಿಎಂ ಸೇರಿದಂತೆ 'ಇಂಡಿಯಾ' ಮೈತ್ರಿಕೂಟದ ನಾಯಕರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಹರಿಪ್ರಸಾದ್ ತಿಳಿಸಿದರು.

ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಸೂಚನೆಯಂತೆ 'ವೋಟ್ ಚೋರಿ', 'ದೇಶ್ ಬಚಾವೋ, ವೋಟ್ ಬಚಾವೋ' ಘೋಷಣೆಗಳಡಿ ಮುಂದಿನ ಎರಡು ತಿಂಗಳ ಕಾಲ ರಾಜ್ಯದ ಎಲ್ಲ ಜಿಲ್ಲೆ ಹಾಗೂ ಬ್ಲಾಕ್ ಮಟ್ಟದಲ್ಲಿ ಅಭಿಯಾನ ಮತ್ತು ಪ್ರತಿಭಟನೆಗಳನ್ನು ನಡೆಸಲಾಗುವುದು ಎಂದರು.

ಪ್ರತಿ ಬ್ಲಾಕ್‌ನಲ್ಲಿ ಮಹಾತ್ಮ ಗಾಂಧೀಜಿ ಅಥವಾ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗಳ ಎದುರು ಪ್ರತಿಭಟನೆ ನಡೆಸಿ, ಬಳಿಕ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಮನವಿ ಸಲ್ಲಿಸುವಂತೆ ಪಕ್ಷದ ಘಟಕಗಳಿಗೆ ಸೂಚನೆ ನೀಡಲಾಗಿದೆ ಎಂದು ಅವರು ವಿವರಿಸಿದರು.

# ಡಬಲ್ ಡೆಕ್ಕರ್ ಯೋಜನೆಗೆ ಬ್ರೇಕ್: ಟೆಂಡರ್ ರದ್ದು

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಪ್ರಸ್ತಾಪಿಸಿದ್ದ ಡಬಲ್ ಡೆಕ್ಕರ್ ಯೋಜನೆಗೆ ಹಿನ್ನಡೆಯಾಗಿದೆ. ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆಯದ ಹಿನ್ನೆಲೆಯಲ್ಲಿ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ಯೋಜನೆಗೆ ಸಂಬಂಧಿಸಿದ ಮೂರು ಸಿವಿಲ್ ಟೆಂಡರ್‌ಗಳನ್ನು ರದ್ದುಗೊಳಿಸಿದೆ.

ಜೆ.ಪಿ. ನಗರ 4ನೇ ಹಂತದಿಂದ ಕೆಂಪಾಪುರದವರೆಗೆ ಹಾಗೂ ಕಡಬಗೆರೆ-ಹೊಸಹಳ್ಳಿ ಮಾರ್ಗದಲ್ಲಿ ಒಟ್ಟು 44.65 ಕಿ.ಮೀ. ಉದ್ದದ ಡಬಲ್ ಡೆಕ್ಕರ್ ಯೋಜನೆ ರೂಪಿಸಲಾಗಿತ್ತು. ಸುಮಾರು 9,700 ಕೋಟಿ ವೆಚ್ಚದ ಈ ಯೋಜನೆಗೆ ರಾಜ್ಯ ಸರ್ಕಾರ ಹಣ ಭರಿಸುವುದಾಗಿ ತಿಳಿಸಿತ್ತು. ಆದರೆ, ಕೇಂದ್ರದ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದಿಂದ ಅನುಮೋದನೆ ದೊರೆತಿಲ್ಲ.

ಪರ್ಯಾಯವಾಗಿ ಸಾರಕ್ಕಿ ಸಿಗ್ನಲ್, ಕಾಮಾಕ್ಯ-ಇಟ್ಟಮಡು-ಹೊಸಕೆರೆಹಳ್ಳಿ, ಸುಮನಹಳ್ಳಿ ಹಾಗೂ ಕಡಬಗೆರೆ-ಹೇರೋಹಳ್ಳಿ ಭಾಗಗಳಲ್ಲಿ ನಾಲ್ಕು ಮೇಲ್ಸೇತುವೆಗಳನ್ನು ಮತ್ತು ಗೊರಗುಂಟೆಪಾಳ್ಯದಲ್ಲಿ ಸುಮಾರು 2 ಕಿ.ಮೀ. ಸುರಂಗ ರಸ್ತೆ ನಿರ್ಮಿಸಲು ಬಿಎಂಆರ್‌ಸಿಎಲ್ ಉದ್ದೇಶಿಸಿದೆ.

ಮೆಟ್ರೋ ಮಾರ್ಗದ ಜತೆಗೆ ಮೇಲ್ಸೇತುವೆ ನಿರ್ಮಿಸುವುದರಿಂದ ಖಾಸಗಿ ವಾಹನಗಳ ಬಳಕೆ ಹೆಚ್ಚಾಗಿ, ಮೆಟ್ರೋ ಪ್ರಯಾಣಿಕರ ಸಂಖ್ಯೆ ಕಡಿಮೆಯಾಗಬಹುದು ಹಾಗೂ ವಾಯುಮಾಲಿನ್ಯ ಹೆಚ್ಚಬಹುದು ಎಂಬ ಆತಂಕವನ್ನು ಅಧ್ಯಯನವೊಂದು ವ್ಯಕ್ತಪಡಿಸಿದೆ. ಆದರೆ, ಡಬಲ್ ಡೆಕ್ಕರ್ ಯೋಜನೆಯಿಂದ ಸಂಚಾರ ದಟ್ಟಣೆ ಕಡಿಮೆಯಾಗಲಿದೆ ಎಂಬುದು ರಾಜ್ಯ ಸರ್ಕಾರದ ವಾದವಾಗಿತ್ತು. ಇದೀಗ ಪರ್ಯಾಯ ಯೋಜನೆಗಳ ಅನುಷ್ಠಾನದ ಮೂಲಕ ನಗರದ ಸಂಚಾರ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕಿದೆ.



**ಸಿಎಂ ಡಿ ಕೆ ಶಿವಕುಮಾರ್ ಅವರು ಬೆಳಗಾವಿಯ ಸರ್ಕಿಟ್ ಹೌಸ್ ಬಳಿ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮೆರವಣಿಗೆಗೆ ಸೋಮವಾರ ಚಾಲನೆ ನೀಡಿದರು. ಸಚಿವ ಸತೀಶ್ ಜಾರಕಿಹೊಳಿ, ಎಸ್ ಎಸ್ ಮಲ್ಲಿಕಾರ್ಜುನ, ವಿಧಾನಸಭೆ ಆಡಳಿತ ಪಕ್ಷದ ಮುಖ್ಯಸಚೇತಕರಾದ ಅಶೋಕ್ ಪಟ್ಟಣ್, ಶಾಸಕರಾದ ಲಕ್ಷ್ಮಿ ಹೆಬ್ಬಾಳ್ಕರ್, ಎನ್ ಎಚ್ ಕೋನರಡ್ಡಿ, ಆಸೀಫ್ ರಾಜು ಸೇಠ್, ಸಿ ಎಸ್ ನಾಡಗೌಡ, ಮಹಾಂತೇಶ್ ಕೌಜಲಗಿ, ಎಂಎಲ್ ಸಿ ಚನ್ನರಾಜ ಹಟ್ಟಿಹೊಳಿ ಮತ್ತಿತರರು ಉಪಸ್ಥಿತರಿದ್ದರು.**

# ಬೆಟ್ಟದಿಂದ ಉರುಳಿ ಬಿದ್ದು ಆನೆ ಮರಿ ಸಾವು: ತಾಯಾನೆಯ ಗೋಳಾಟದ ವಿಡಿಯೋ ವೈರಲ್

● ವಿಕ್ರಮ ವಾಹಿನಿ । ವಯನಾಡ್

ಕೇರಳದ ವಯನಾಡ್ ಜಿಲ್ಲೆಯ ಕಾಟಿಕುಲಂ ಬಳಿಯ ಮುತ್ತುಮರಿ ಪ್ರದೇಶದಲ್ಲಿ ಬೆಟ್ಟದ ಇಳಿಜಾರಿನಿಂದ ಬಿದ್ದು ಮರಿ ಆನೆಯೊಂದು ಮೃತಪಟ್ಟಿದೆ. ಮರಿಯನ್ನು ರಕ್ಷಿಸಲು ತಾಯಿ ಆನೆ ನಡೆಸಿದ ಹತಾಶ ಪ್ರಯತ್ನದ ದೃಶ್ಯಗಳು ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

ಅರಣ್ಯ ಪ್ರದೇಶದಲ್ಲಿ ಆನೆಗಳ ಹಿಂಡು ಸಾಗುತ್ತಿದ್ದ ವೇಳೆ ಆಕಸ್ಮಿಕವಾಗಿ ಕಾಲು ಜಾರಿದ ಮರಿ ಆನೆ ಕಡಿದಾದ ಇಳಿಜಾರಿನಿಂದ ಕೆಳಗೆ ಬಿದ್ದಿದೆ ಎನ್ನಲಾಗಿದೆ. ಇದರಿಂದ ಆತಂಕಗೊಂಡ ತಾಯಿ ಆನೆ, ತನ್ನ ಸೊಂಡಿಲಿನಿಂದ ಮರಿಯನ್ನು ಮೇಲಕ್ಕೆತ್ತಲು ಹಲವು ಬಾರಿ ಪ್ರಯತ್ನಿಸಿದೆ. ಮರಿಯ ಸ್ಥಿತಿ ಕಂಡು ತಾಯಿ ಆನೆ ಗೋಳಾಡಿದ ದೃಶ್ಯಗಳು ಪ್ರತ್ಯಕ್ಷದರ್ಶಿಗಳ ಮನಕಲಕಿವೆ.

ವಿಷಯ ತಿಳಿದು ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಪಶುವೈದ್ಯರು ಮರಿ ಆನೆಗೆ ಚಿಕಿತ್ಸೆ ನೀಡಲು ಮುಂದಾದರು. ಆದರೆ, ಬೆಟ್ಟದಿಂದ ಬಿದ್ದ ರಭಸಕ್ಕೆ ತೀವ್ರವಾಗಿ ಗಾಯಗೊಂಡಿದ್ದ ಮರಿ ಆನೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದೆ. ಘಟನೆಯಿಂದ ಅರಣ್ಯ ಸಿಬ್ಬಂದಿ ಹಾಗೂ ಸ್ಥಳೀಯರು ದುಃಖ ವ್ಯಕ್ತಪಡಿಸಿದ್ದಾರೆ.

ಮರಿ ಆನೆಯನ್ನು ಕಳೆದುಕೊಂಡ ತಾಯಿ ಆನೆಯ ಅಸಹಾಯಕತೆ ಹಾಗೂ ಅದನ್ನು ರಕ್ಷಿಸಲು ನಡೆಸಿದ ಹೋರಾಟದ ದೃಶ್ಯಗಳು ಪ್ರಾಣಿ ಪ್ರಿಯರ ಮನಕಲಕಿವೆ. ವನ್ಯಜೀವಿಗಳ ಸುರಕ್ಷತೆ ಮತ್ತು ಅರಣ್ಯ ಪ್ರದೇಶಗಳಲ್ಲಿ ಇಂತಹ ಅವಘಡಗಳನ್ನು ತಡೆಯುವ ಅಗತ್ಯದ ಕುರಿತು ಈ ಘಟನೆ ಮತ್ತೆ ಗಮನ ಸೆಳೆದಿದೆ.

# ಮೀಸಲಾತಿ ಹೆಚ್ಚಳ: ಸುಪ್ರೀಂ ಕೋರ್ಟ್‌ನಲ್ಲಿ ರಾಜ್ಯದ ಪರ ವಾದ

● ವಿಕ್ರಮ ವಾಹಿನಿ । ಬೆಂಗಳೂರು

ಮೀಸಲಾತಿ ಪ್ರಮಾಣ ಹೆಚ್ಚಿಸುವ ವಿಚಾರವಾಗಿ ಸುಪ್ರೀಂ ಕೋರ್ಟ್‌ನಲ್ಲಿ ರಾಜ್ಯದ ಪರವಾಗಿ ವಾದ ಮಂಡಿಸಲು ಸರ್ಕಾರ ನಿರ್ಧರಿಸಿದೆ ಎಂದು ಸಚಿವ ಮುನಿಯಪ್ಪ ತಿಳಿಸಿದ್ದಾರೆ.

ಬೆಂಗಳೂರಿನ ಶಾಸಕರ ಭವನದಲ್ಲಿ ಮಾತನಾಡಿದ ಅವರು, ಹಿಂದಿನ ಸರ್ಕಾರದ ಅವಧಿಯಲ್ಲಿ ಶೇ.17 ಮತ್ತು ಶೇ.7ರ ಮೀಸಲಾತಿ ಕುರಿತ ಪ್ರಕ್ರಿಯೆ ಪೂರ್ಣಗೊಳ್ಳಬೇಕಿತ್ತು. ಆದರೆ, ಅದು ಪೂರ್ಣಗೊಂಡಿಲ್ಲ. ಮೀಸಲಾತಿ ಪ್ರಮಾಣ ಶೇ.50ರ ಮಿತಿಯನ್ನು ಮೀರಬಾರದು ಎಂಬುದು ಸುಪ್ರೀಂ ಕೋರ್ಟ್‌ನ ನಿಲುವಾಗಿದ್ದು, ಈ ಹಿನ್ನೆಲೆಯಲ್ಲಿ ಮೇಲ್ಮನವಿ ಸಲ್ಲಿಸುವ ಕುರಿತು ಸಚಿವ ಸಂಪುಟದಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

ದೇಶದ ಹಲವು ರಾಜ್ಯಗಳಲ್ಲಿ ಜನಸಂಖ್ಯೆಯ ಆಧಾರದ ಮೇಲೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕದಲ್ಲಿಯೂ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಜಾರಿಗೊಳಿಸುವಂತೆ ನ್ಯಾಯಾಲಯದಲ್ಲಿ ಮನವಿ ಮಾಡಲಾಗುವುದು. ಈ ಕುರಿತು ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.



**ನೇಮಕಾತಿಗೆ ಅಡ್ಡಿಯಾಗದಂತೆ ಕ್ರಮ:** ಮೀಸಲಾತಿ ವಿವಾದದಿಂದ ಸರ್ಕಾರಿ ನೇಮಕಾತಿ ಪ್ರಕ್ರಿಯೆಗೆ ಅಡ್ಡಿಯಾಗುತ್ತಿರುವ ಕುರಿತು ಪ್ರತಿಕ್ರಿಯಿಸಿದ ಮುನಿಯಪ್ಪ, ಸರ್ಕಾರ ಕಾನೂನಿನ ಚೌಕಟ್ಟಿನಲ್ಲಿಯೇ ಕಾರ್ಯನಿರ್ವಹಿಸಬೇಕಾಗುತ್ತದೆ ಎಂದರು.

ಶೇ.50ರ ಮೀಸಲಾತಿ ಮಿತಿ ಕುರಿತ ವಾದದ ನಡುವೆಯೂ, ಶೇ.17 ಮತ್ತು ಶೇ.7ರ ಮೀಸಲಾತಿ ಕುರಿತು ರಾಜ್ಯದ ನಿಲುವನ್ನು ನ್ಯಾಯಾಲಯದಲ್ಲಿ ಮಂಡಿಸಲಾಗುವುದು. ಕನಿಷ್ಠ ಈ ಹಿಂದೆ ಜಾರಿಯಲ್ಲಿದ್ದ ಶೇ.15 ಮತ್ತು ಶೇ.3ರ ಮೀಸಲಾತಿಯನ್ನಾದರೂ ಅನುಷ್ಠಾನಗೊಳಿಸಬೇಕು. ನಿರಂತರವಾಗಿ ತಕರಾರುಗಳು ಮುಂದುವರಿದರೆ ಯಾವುದೇ ಪ್ರಗತಿ ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟರು.

**ಕನ್ನಡಿಗರಿಗೆ ಉದ್ಯೋಗಾವಕಾಶ ಕಲ್ಪಿಸಿ:** ಕಂಪನಿಗಳಲ್ಲಿ ಕನ್ನಡಿಗರಿಗೆ ಉದ್ಯೋಗ ನಿರಾಕರಿಸಲಾಗುತ್ತಿದೆ ಎಂಬ ಆರೋಪದ ಕುರಿತು ಮಾತನಾಡಿದ ಅವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧ ಕಂಪನಿಗಳಲ್ಲಿ ಈ ಬಗ್ಗೆ ವಿಚಾರಣೆ ನಡೆಸಲಾಗಿದೆ. ಅಲ್ಲಿನ ಕಂಪನಿಗಳಲ್ಲಿ ಶೇ.75ರಷ್ಟು ಉದ್ಯೋಗಗಳಲ್ಲಿ ಕನ್ನಡಿಗರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು.

ಎಲ್ಲಿಯಾದರೂ ಕನ್ನಡಿಗರಿಗೆ ಉದ್ಯೋಗಾವಕಾಶ ನಿರಾಕರಿಸುತ್ತಿರುವುದು ಕಂಡುಬಂದರೆ, ಸಂಬಂಧಪಟ್ಟ ಕಂಪನಿಗಳ ಪ್ರತಿನಿಧಿಗಳನ್ನು ಕರೆದು ಚರ್ಚಿಸಲಾಗುವುದು. ಅಭಿವೃದ್ಧಿ ಯೋಜನೆಗಳಿಗಾಗಿ ಭೂಮಿ ಕಳೆದುಕೊಂಡವರಿಗೆ ಉದ್ಯೋಗದಲ್ಲಿ ಆದ್ಯತೆ ನೀಡಬೇಕು. ಆಯಾ ಜಿಲ್ಲೆಗಳ ಸ್ಥಳೀಯ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು. ತಮ್ಮ ಜಿಲ್ಲೆಯಲ್ಲಿ ಈ ಕ್ರಮ ಅನುಸರಿಸಲಾಗುತ್ತಿದೆ ಎಂದು ಮುನಿಯಪ್ಪ ಹೇಳಿದರು.

# ನೆಲಕದಿರನಹಳ್ಳಿ ಭೂಸ್ವಾಧೀನ ರದ್ದು: ಸುಪ್ರೀಂ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಉತ್ತರ ತಾಲೂಕಿನ ನೆಲಕದಿರನಹಳ್ಳಿಯ 59 ಎಕರೆ 6 ಗುಂಟೆ ಜಮೀನಿನ ಭೂಸ್ವಾಧೀನವನ್ನು ರದ್ದುಗೊಳಿಸಿರುವ ಸುಪ್ರೀಂ ಕೋರ್ಟ್, ಮೂಲ ಮಾಲೀಕರಿಗೆ ಜಮೀನು ಮರಳಿಸುವಂತೆ ಆದೇಶಿಸಿದೆ.

ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಮತ್ತು ಕೆ. ವಿನೋದ್ ಚಂದ್ರನ್ ಅವರ ಪೀಠ, ಕರ್ನಾಟಕ ಹೈಕೋರ್ಟ್‌ನ ವಿಭಾಗೀಯ ಪೀಠದ ಆದೇಶವನ್ನು ರದ್ದುಗೊಳಿಸಿ, ಏಕಸದಸ್ಯ ಪೀಠದ ತೀರ್ಪನ್ನು ಎತ್ತಿಹಿಡಿದಿದೆ. ಭೂಸ್ವಾಧೀನ ಪ್ರಕ್ರಿಯೆಯಲ್ಲಿ ನಡೆದ ಕಾನೂನು ಉಲ್ಲಂಘನೆಗಳನ್ನು ಪರಿಗಣಿಸಿದ ನ್ಯಾಯಾಲಯ, ಅರ್ಜಿ ಸಲ್ಲಿಸದ ಭೂಮಾಲೀಕರಿಗೂ ಜಮೀನು ಹಿಂದಿರುಗಿಸುವಂತೆ ನಿರ್ದೇಶಿಸಿದೆ.

ಪೀಣ್ಯದ ಕರ್ನಾಟಕ ಹೌಸ್ ಬಿಲ್ಡಿಂಗ್ ಕೋ-ಆಪರೇಟಿವ್ ಸೊಸೈಟಿ, 'ಭಾಗ್ಯ ಎಂಟರ್‌ಪ್ರೈಸಸ್' ಮೂಲಕ ಜಮೀನು ಸ್ವಾಧೀನಕ್ಕೆ ಮುಂದಾಗಿತ್ತು. 1988-89ರಲ್ಲಿ ಸರ್ಕಾರ ಅಧಿಸೂಚನೆ ಹೊರಡಿಸಿತ್ತು. ಈ ಪ್ರಕ್ರಿಯೆಯನ್ನು ಪ್ರಶ್ನಿಸಿ ನಡೆದ ದೀರ್ಘಕಾಲದ ಕಾನೂನು ಹೋರಾಟಕ್ಕೆ ಸುಪ್ರೀಂ ಕೋರ್ಟ್ ತೀರ್ಪು ಮಹತ್ವದ ತಿರುವು ನೀಡಿದೆ. ಈ ತೀರ್ಪಿನಿಂದ ಹಲವು ದಶಕಗಳಿಂದ ಬಾಕಿ ಉಳಿದಿದ್ದ ಭೂವಿವಾದಕ್ಕೆ ಪರಿಹಾರ ದೊರೆಯುವ ನಿರೀಕ್ಷೆ ಮೂಡಿದೆ.

# ಕಬ್ಬು ಬೆಳೆಗಾರರ ಸಮಸ್ಯೆಗೆ ಶಾಶ್ವತ ಪರಿಹಾರ ನಮ್ಮ ಸಂಕಲ್ಪ: ಸಿಎಂ

## ಕೇಂದ್ರ ಸಮಿತಿ ಮುಂದೆ ರೈತರ ಪರ ವಾದ; ಕಬ್ಬು ಅರೆಯಲು ಅವಕಾಶ ನೀಡುವಂತೆ ಮನವಿ

● ವಿಕ್ರಮ ವಾಹಿನಿ । ಬೆಳಗಾವಿ

ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವುದು ಸರ್ಕಾರದ ಅಚಲ ನಿರ್ಧಾರವಾಗಿದ್ದು, ಆತುರದಲ್ಲಿ ಯಾವುದೇ ತೀರ್ಮಾನ ಕೈಗೊಳ್ಳುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಕಬ್ಬು ಅರೆಯುವ ಪ್ರಕ್ರಿಯೆಗೆ ಅವಕಾಶ ನೀಡುವಂತೆ ರೈತರಲ್ಲಿ ಮನವಿ ಮಾಡಿದ ಅವರು, ಕೇಂದ್ರ ಸರ್ಕಾರದ ಸಮಿತಿ ಮುಂದೆ ಬೆಳೆಗಾರರ ಪರವಾಗಿ ವಾದಿಸುವುದಾಗಿ ಭರವಸೆ ನೀಡಿದರು.



ಸುವರ್ಣ ವಿಧಾನಸೌಧದಲ್ಲಿ ಸೋಮವಾರ ಕಬ್ಬು ಬೆಳೆಗಾರರ ಸಮಸ್ಯೆಗಳ ಕುರಿತು ಇಡೀ ದಿನ ಸಭೆ ನಡೆಸಿದ ಮುಖ್ಯಮಂತ್ರಿ, ಮೊದಲು ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ, ಬಳಿಕ ರೈತರೊಂದಿಗೆ ಪ್ರತ್ಯೇಕವಾಗಿ ಚರ್ಚಿಸಿದರು. ನಂತರ ಉಭಯ ಬಣಗಳ ಜತೆಗೂ ಸಭೆ ನಡೆಸಿ ಸಮಸ್ಯೆಗಳ ಪರಿಹಾರದ ಕುರಿತು ಸಮಾಲೋಚಿಸಿದರು.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಬ್ಬಿನ ದರದ ವಿಚಾರದಲ್ಲಿ ಕೇಂದ್ರ ಸರ್ಕಾರವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ. ಸಕ್ಕರೆಯ ಕನಿಷ್ಠ ಮಾರಾಟ ಬೆಲೆ (ಎಂಎಸ್‌ಪಿ) ಹೆಚ್ಚಳವಾಗದೆ ಕಾರ್ಖಾನೆ ಮಾಲೀಕರು ರೈತರ ಬೇಡಿಕೆಗೆ ಒಪ್ಪುತ್ತಿಲ್ಲ. ಹೀಗಾಗಿ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಿ ಸೂಕ್ತ ಪರಿಹಾರ ಕಂಡುಕೊಳ್ಳಬೇಕಿದೆ ಎಂದರು.

**29ರಂದು ಕೇಂದ್ರ ಸಮಿತಿ ಭೇಟಿ:** ಅಕ್ಟೋಬರ್ 29ರಂದು ಕೇಂದ್ರ ಸರ್ಕಾರ ರಚಿಸಿರುವ ಸಮಿತಿ ರಾಜ್ಯಕ್ಕೆ ಆಗಮಿಸಲಿದೆ. ಸಮಿತಿ, ಸಕ್ಕರೆ ಕಾರ್ಖಾನೆ ಮಾಲೀಕರು ಹಾಗೂ ಅಧಿಕಾರಿಗಳೊಂದಿಗೆ ಮತ್ತೊಮ್ಮೆ ಚರ್ಚಿಸಿದ ಬಳಿಕ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ಆತುರದ ನಿರ್ಧಾರ ಕೈಗೊಳ್ಳುವುದಿಲ್ಲ. ರೈತರು ಸರ್ಕಾರದ ಪರಿಸ್ಥಿತಿಯನ್ನೂ ಅರ್ಥಮಾಡಿಕೊಂಡು ಸಹಕರಿಸಬೇಕು ಎಂದು ಮನವಿ ಮಾಡಿದರು.

**ಕೇಂದ್ರದ ಮೇಲೆ ಒತ್ತಡ ಹೇರಲು ಪ್ರಯತ್ನ:** ರೈತರ ಸಭೆಯಲ್ಲಿ ಮಾತನಾಡಿದ ಶಿವಕುಮಾರ್, ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಮಹಾರಾಷ್ಟ್ರ ಮುಖ್ಯಮಂತ್ರಿ ಅವರೊಂದಿಗೂ ಚರ್ಚಿಸಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕಿದೆ. ಪ್ರಧಾನಮಂತ್ರಿಗಳಿಗೆ ಈಗಾಗಲೇ ಪತ್ರ ಬರೆದಿದ್ದು, ಕೇಂದ್ರ ಸಚಿವರೊಂದಿಗೂ ಮಾತುಕತೆ ನಡೆಸುವುದಾಗಿ ತಿಳಿಸಿದರು. ಕೇಂದ್ರ ಸಮಿತಿ ರಾಜ್ಯಕ್ಕೆ ಬಂದಾಗ ಅದರ ಮುಂದೆ ರೈತರ ಪರವಾಗಿ ಮಾತನಾಡುವುದಾಗಿ



**ಕಬ್ಬು ಬೆಳೆಗಾರರ ಸಮಸ್ಯೆ ಕುರಿತು ಸಿಎಂ ಡಿ ಕೆ ಶಿವಕುಮಾರ್ ಅವರು ಬೆಳಗಾವಿಯ ಸರ್ಕಿಟ್ ಹೌಸ್ ನಲ್ಲಿ ಸಕ್ಕರೆ ಮಾಲೀಕರೊಂದಿಗೆ ಸೋಮವಾರ ರಾತ್ರಿ ಎರಡನೇ ಸುತ್ತಿನ ಚರ್ಚೆ ನಡೆಸಿದರು. ಸಚಿವ ಸತೀಶ್ ಜಾರಕಿಹೊಳಿ, ಲಕ್ಷ್ಮಣ್ ಸವದಿ, ಸಂತೋಷ್ ಲಾಡ್, ಯಶವಂತರಾಯ ಗೌಡ ಪಾಟೀಲ್, ಶಾಸಕ ಎನ್ ಎಚ್ ಕೋನರೆಡ್ಡಿ, ಸಕ್ಕರೆ ಕಾರ್ಖಾನೆ ಮಾಲೀಕ ಹೆಬ್ಬಾರ್ ವಿವಿಧ ಸಕ್ಕರೆ ಕಾರ್ಖಾನೆಗಳ ಮಾಲೀಕರು ಉಪಸ್ಥಿತರಿದ್ದರು.**

ಭರವಸೆ ನೀಡಿದರು. ಕಬ್ಬಿನ ಇಳುವರಿ ಮತ್ತು ಸಕ್ಕರೆ ಉತ್ಪಾದನೆಯೂ ಕುಸಿದಿದೆ. ಇಂತಹ ಸಂದರ್ಭದಲ್ಲಿ ಕಾರ್ಖಾನೆಗಳು ಹಾಗೂ ಕೇಂದ್ರ ಸರ್ಕಾರವನ್ನು ಒಪ್ಪಿಸಿ ಪರಿಹಾರ ಕಲ್ಪಿಸಲು ಪ್ರಯತ್ನಿಸಲಾಗುತ್ತಿದೆ. ಕೇವಲ ರಾಜಕೀಯ ಆರೋಪ-ಪ್ರತ್ಯಾರೋಪಗಳಿಂದ ಸಮಸ್ಯೆ ಬಗೆಹರಿಯುವುದಿಲ್ಲ ಎಂದು ಹೇಳಿದರು.

**ಸರ್ಕಾರದ ಆರ್ಥಿಕ ಸ್ಥಿತಿಯನ್ನೂ ಅರಿಯಿರಿ:** ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ವಿವರಿಸಿದ ಮುಖ್ಯಮಂತ್ರಿ, ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡಲು ವಾರ್ಷಿಕ ರೂ 22 ಸಾವಿರ ಕೋಟಿ ಹಾಗೂ ಗೃಹಜ್ಯೋತಿ ಯೋಜನೆಗೆ ರೂ 7 ಸಾವಿರ ಕೋಟಿ ವೆಚ್ಚವಾಗುತ್ತಿದೆ ಎಂದರು. ಬರದ ಹಿನ್ನೆಲೆಯಲ್ಲಿ ವಿದ್ಯುತ್ ಬಳಕೆ ಹೆಚ್ಚಾಗಿದ್ದು, ಹೆಚ್ಚುವರಿ ವೆಚ್ಚದ ಹೊರೆ ಸರ್ಕಾರದ ಮೇಲಿದೆ. ಕುಡಿಯುವ ನೀರಿನ ಸಮಸ್ಯೆ ಹಾಗೂ ವಿದ್ಯುತ್ ಉತ್ಪಾದನೆಯಲ್ಲಿನ ಕುಸಿತವೂ ಸವಾಲಾಗಿದೆ ಎಂದು ತಿಳಿಸಿದರು. ಕಳೆದ ವರ್ಷ ಕಾರ್ಖಾನೆ ಮಾಲೀಕರೊಂದಿಗೆ ಚರ್ಚಿಸಿ ಕಬ್ಬಿಗೆ ಹೆಚ್ಚುವರಿಯಾಗಿ ರೂ 300 ನೀಡುವ ಕುರಿತು ತೀರ್ಮಾನಿಸಲಾಗಿತ್ತು. ರೈತರ ಬೇಡಿಕೆಗಳನ್ನು ಈಡೇರಿಸುವ ಅಗತ್ಯವಿದೆ ಎಂಬುದನ್ನು ಸರ್ಕಾರ ಒಪ್ಪಿಕೊಂಡಿದ್ದರೂ, ಹಣಕಾಸಿನ ಸ್ಥಿತಿಗತಿಗಳನ್ನೂ ಪರಿಗಣಿಸಬೇಕಿದೆ. ಸಕ್ಕರೆಯ ಎಂಎಸ್‌ಪಿ ಹೆಚ್ಚಿಸಿದರೆ ರೈತರ ಬೇಡಿಕೆಗೆ ಸ್ಪಂದಿಸಲು ಸಾಧ್ಯವಾಗಲಿದೆ ಎಂದು ಕಾರ್ಖಾನೆ ಮಾಲೀಕರು ತಿಳಿಸಿದ್ದಾರೆ. ಹೀಗಾಗಿ ಕೇಂದ್ರ ಸರ್ಕಾರದ ಸಹಕಾರವೂ ಅಗತ್ಯವಾಗಿದೆ ಎಂದು ಹೇಳಿದರು.

ರೈತರ ಹೋರಾಟಕ್ಕೆ ಗೌರವ ನೀಡಿ ಕಿತ್ತೂರಿನಲ್ಲಿ ಅವರನ್ನು ಭೇಟಿ ಮಾಡಿದ್ದೆ. ಅಂದು ನೀಡಿದ್ದ ಭರವಸೆಯಂತೆ ಸಭೆ ನಡೆಸಲಾಗಿದೆ. ರೈತರ ಧ್ವನಿಯೇ ತಮ್ಮ ಧ್ವನಿಯಾಗಿದ್ದು, ಸಮಸ್ಯೆ ಪರಿಹಾರಕ್ಕೆ ಸರ್ಕಾರ ಬದ್ಧವಾಗಿದೆ. ಆದರೆ, ತಕ್ಷಣವೇ ಪರಿಹಾರ ಘೋಷಿಸಬೇಕೆಂಬ ಒತ್ತಡದ ಬದಲು ಎಲ್ಲರೂ ಸಹಕರಿಸಬೇಕು ಎಂದು ಶಿವಕುಮಾರ್ ಮನವಿ ಮಾಡಿದರು.

# ರಾಜ್ಯ-ರಾಷ್ಟ್ರ

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ನ. 2ರಿಂದ ಬಿಜೆಪಿ ಉಸ್ತುವಾರಿ ಹರೀಶ್ ದ್ವಿವೇದಿ ರಾಜ್ಯ ಪ್ರವಾಸ

● ವಿಕ್ರಮ ವಾಹಿನಿ | ಬೆಂಗಳೂರು

ಬಿಜೆಪಿ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ ಅವರು ನವೆಂಬರ್ 2, 3 ಮತ್ತು 4ರಂದು ಬೆಂಗಳೂರಿಗೆ ಭೇಟಿ ನೀಡಲಿದ್ದು, ಪಕ್ಷದ ಸಂಘಟನೆ ಬಲಪಡಿಸುವ ಕುರಿತು ಮುಖಂಡರೊಂದಿಗೆ ಚರ್ಚಿಸಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವೆಂಬರ್ 2ರಂದು ಬೆಂಗಳೂರಿನಲ್ಲಿ ರಾಜ್ಯ ಪದಾಧಿಕಾರಿಗಳ ಸಭೆ ನಡೆಯಲಿದೆ. ಈ ಸಂದರ್ಭದಲ್ಲಿ ದ್ವಿವೇದಿ ಅವರು ಪಕ್ಷದ ಕೋರ್ ಕಮಿಟಿ ಸದಸ್ಯರು ಹಾಗೂ ಹಿರಿಯ ಮುಖಂಡರನ್ನು ಭೇಟಿ ಮಾಡಲಿದ್ದಾರೆ. ಬಳಿಕ ಪಕ್ಷ ಸಂಘಟನೆ ಬಲಪಡಿಸುವ ಉದ್ದೇಶದಿಂದ ಕೋಲಾರ ಮತ್ತು ಚಿತ್ರದುರ್ಗ ಜಿಲ್ಲೆಗಳಿಗೂ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.



ರಾಜ್ಯದಲ್ಲಿ ಬಿಜೆಪಿ ಪರ ವಾತಾವರಣ ನಿರ್ಮಾಣವಾಗುತ್ತಿದ್ದು, ಖಾಸಗಿ ಸಮೀಕ್ಷೆಯೊಂದು ಪಕ್ಷ 115 ಸ್ಥಾನಗಳನ್ನು ಗೆಲ್ಲಲಿದೆ ಎಂದು ಅಂದಾಜಿಸಿದೆ. ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳನ್ನು ನಡೆಸಲು ಕಾಂಗ್ರೆಸ್ ಸರ್ಕಾರಕ್ಕೆ ಇಚ್ಛಾಶಕ್ತಿಯಿಲ್ಲ ಎಂದು ಆರೋಪಿಸಿದ ಅವರು, ಮೀಸಲಾತಿ ವರ್ಗೀಕರಣದ ವಿಚಾರದಲ್ಲಿ ಉದ್ದೇಶಪೂರ್ವಕವಾಗಿ ಗೊಂದಲ ಸೃಷ್ಟಿಸಲಾಗುತ್ತಿದೆ ಎಂಬ ಅನುಮಾನ ವ್ಯಕ್ತಪಡಿಸಿದರು. ಬಿಜೆಪಿ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಎದುರಿಸಲು ಸಂಪೂರ್ಣ ಸಿದ್ಧವಾಗಿದೆ ಎಂದರು.

ತೀವ್ರ ಬರಗಾಲದ ಸಂದರ್ಭದಲ್ಲೂ ಕಾವೇರಿ ಕೊಳ್ಳದ ರೈತರ ಹಿತಾಸಕ್ತಿ ಕಾಪಾಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ವಿಜಯೇಂದ್ರ ಟೀಕಿಸಿದರು. ಸುಪ್ರೀಂ ಕೋರ್ಟ್ ಮತ್ತು ಕಾವೇರಿ ನ್ಯಾಯಮಂಡಳಿ ಮುಂದೆ ರಾಜ್ಯದ ವಾಸ್ತವ ಪರಿಸ್ಥಿತಿಯನ್ನು ಸಮರ್ಪಕವಾಗಿ ಮನವರಿಕೆ ಮಾಡಿಕೊಡುವಲ್ಲಿ ಸರ್ಕಾರ ಎಡವಿದೆ ಎಂದು ಆರೋಪಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬಿಹಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ತಂದೆಯ ಕುರಿತು ನೀಡಿರುವ ಹೇಳಿಕೆಗೆ ವಿಜಯೇಂದ್ರ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈ ಹೇಳಿಕೆ ಕಾಂಗ್ರೆಸ್ ಪಕ್ಷದ ಹತಾಶೆಯನ್ನು ತೋರಿಸುತ್ತದೆ ಎಂದು ಟೀಕಿಸಿದ ಅವರು, ಮೋದಿ ಸತತ ಮೂರನೇ ಬಾರಿಗೆ ಪ್ರಧಾನಿಯಾಗಿರುವುದನ್ನು ಹಾಗೂ ಅವರ ಜನಪ್ರಿಯತೆಯನ್ನು ಕಾಂಗ್ರೆಸ್ ಸಹಿಸಿಕೊಳ್ಳುತ್ತಿಲ್ಲ ಎಂದು ಆರೋಪಿಸಿದರು. ಪ್ರಧಾನಿ ಮತ್ತು ಅವರ ಕುಟುಂಬದ ಕುರಿತು ನೀಡಿರುವ ಹೇಳಿಕೆಗಾಗಿ ಖರ್ಗೆ ಅವರು ಬಹಿರಂಗವಾಗಿ ಕ್ಷಮೆಯಾಚಿಸಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

## ಯಮುನಾ ನದಿಯಲ್ಲಿ ವಿಷಕಾರಿ ನೊರೆ: ಛತ್ ಪೂಜೆಗೂ ಮುನ್ನ ಆತಂಕ

● ವಿಕ್ರಮ ವಾಹಿನಿ | ನವದೆಹಲಿ

ದೆಹಲಿಯ ಕಾಳಿಂದಿ ಕುಂಜ್ ಬಳಿ ಯಮುನಾ ನದಿಯ ಮೇಲ್ಮೈನಲ್ಲಿ ದಟ್ಟವಾದ ಬಿಳಿ ನೊರೆ ಕಾಣಿಸಿಕೊಂಡಿದ್ದು, ಛತ್ ಪೂಜೆಗೂ ಮುನ್ನ ಭಕ್ತರು ಹಾಗೂ ಪರಿಸರ ಪ್ರೇಮಿಗಳಲ್ಲಿ ಆತಂಕ ಮೂಡಿಸಿದೆ. ನದಿಯ ಮೇಲ್ಮೈನಲ್ಲಿ ನೊರೆ ತೇಲುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಕೈಗಾರಿಕಾ ತ್ಯಾಜ್ಯ, ಡಿಟರ್ಜೆಂಟ್‌ಗಳು ಹಾಗೂ ಸಂಸ್ಕರಿಸದ ಒಳಚರಂಡಿ ನೀರು ನದಿಗೆ ಸೇರುತ್ತಿರುವುದು ಮಾಲಿನ್ಯಕ್ಕೆ ಪ್ರಮುಖ ಕಾರಣವೆಂದು ಹೇಳಲಾಗುತ್ತಿದೆ. ಛತ್ ಪೂಜೆ ವೇಳೆ ಭಕ್ತರು ಯಮುನಾ ನದಿಯಲ್ಲಿ ನಿಂತು ಸೂರ್ಯದೇವನಿಗೆ ಅರ್ಘ್ಯ ಅರ್ಪಿಸುವ ಸಂಪ್ರದಾಯವಿದ್ದು, ಕಲುಷಿತ ನೀರಿನಿಂದ ಚರ್ಮದ ಸಮಸ್ಯೆ ಸೇರಿದಂತೆ ಆರೋಗ್ಯದ ಅಪಾಯ ಉಂಟಾಗುವ ಆತಂಕ ವ್ಯಕ್ತವಾಗಿದೆ.



ಸಿಎಂ ಡಿ ಕೆ ಶಿವಕುಮಾರ್ ಅವರು ಬೆಳಗಾವಿಯ ನಾಗನೂರು ಶ್ರೀ ರುದ್ರಾಕ್ಷಿಮಠಕ್ಕೆ ಸೋಮವಾರ ಭೇಟಿ ನೀಡಿ ಪೀಠಾಧಿಪತಿಗಳಾದ ಡಾ. ಅಲ್ಲಮಪ್ರಭು ಮಹಾಸ್ವಾಮೀಜಿಗಳ ಆಶೀರ್ವಾದ ಪಡೆದರು. ಸಚಿವ ಸತೀಶ್ ಜಾರಕಿಹೊಳಿ, ಎಸ್ ಎಸ್ ಮಲ್ಲಿಕಾರ್ಜುನ, ವಿಧಾನಸಭೆ ಆಡಳಿತ ಪಕ್ಷದ ಮುಖ್ಯಸಚೇತಕರಾದ ಅಶೋಕ್ ಪಟ್ಟಣ್, ಆಸೀಫ್ ರಾಜು ಸೇಠ್, ಸಿ ಎಸ್ ನಾಡಗೌಡ, ಮಹಾಂತೇಶ್ ಕೌಜಲಗಿ, ಬಾಬಾಸಾಹೇಬ್ ಪಾಟೀಲ್, ಎಂಎಲ್ ಸಿ ಚನ್ನರಾಜ ಹಟ್ಟಿಹೊಳಿ ಮತ್ತಿತರರು ಇದ್ದರು.

## ಚಿಂತಾಮಣಿ ಬಳಿ ಅಪಘಾತ: ನವದಂಪತಿ ಸಾವು

● ವಿಕ್ರಮ ವಾಹಿನಿ | ಚಿಕ್ಕಬಳ್ಳಾಪುರ

ಮದುವೆಯಾಗಿ ಕೆಲವೇ ತಿಂಗಳುಗಳಾಗಿದ್ದ ನವದಂಪತಿ ರಸ್ತೆ ಅಪಘಾತದಲ್ಲಿ ಮೃತಪಟ್ಟಿರುವ ದುರ್ಘಟನೆ ಚಿಂತಾಮಣಿ–ಬೆಂಗಳೂರು ರಸ್ತೆಯಲ್ಲಿ ನಡೆದಿದೆ. ಇಕೋ ಕಾರು ಮತ್ತು ಎಲೆಕ್ಟ್ರಿಕ್ ಬೈಕ್ ನಡುವೆ ಸಂಭವಿಸಿದ ಮುಖಾಮುಖಿ ಡಿಕ್ಕಿಯಲ್ಲಿ ಬೈಕ್‌ನಲ್ಲಿದ್ದ ದಂಪತಿ ಸ್ಥಳದಲ್ಲೇ ಮೃತಪಟ್ಟಿದ್ದು, ಕಾರಿನಲ್ಲಿದ್ದ ಮೂವರು ಗಾಯಗೊಂಡಿದ್ದಾರೆ.

ಮೃತರನ್ನು ಚಿಂತಾಮಣಿ ನಗರದ ಎಂ.ಜಿ. ರಸ್ತೆಯ ಶ್ರೀನಿವಾಸ್ ಜ್ಯುವೆಲ್ಸ್ ಸಮೀಪದ ನಿವಾಸಿಗಳಾದ ಷಣ್ಮುಖ (27) ಮತ್ತು ಅವರ ಪತ್ನಿ ಮಿಥುಲ (24) ಎಂದು ಗುರುತಿಸಲಾಗಿದೆ. ದಂಪತಿ ಎಲೆಕ್ಟ್ರಿಕ್ ಬೈಕ್‌ನಲ್ಲಿ ಸಂಚರಿಸುತ್ತಿದ್ದಾಗ ಎದುರಿನಿಂದ ಬಂದ ಇಕೋ ಕಾರು ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಎರಡೂ ವಾಹನಗಳು ಜಖಂಗೊಂಡಿದ್ದು, ಗಂಭೀರವಾಗಿ ಗಾಯಗೊಂಡಿದ್ದ ದಂಪತಿ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ.

ಅಪಘಾತದಲ್ಲಿ ಕಾರಿನಲ್ಲಿದ್ದ ಸೂರಜ್, ಎಂ.ಎಲ್. ಕುಮಾರ್ ಮತ್ತು ಅತುಲಾ ಗಾಯಗೊಂಡಿದ್ದು, ಅವರನ್ನು ತಕ್ಷಣ ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಮಾಹಿತಿ ತಿಳಿದು ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ಶಿವರಾಜ್ ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪಘಾತಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ. ಈ ಸಂಬಂಧ ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಅಪಘಾತದಿಂದಾಗಿ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ನವದಂಪತಿಯ ಅಕಾಲಿಕ ಸಾವಿನ ಸುದ್ದಿ ತಿಳಿದು ಕುಟುಂಬಸ್ಥರು ಹಾಗೂ ಪರಿಚಿತರು ದುಃಖದಲ್ಲಿ ಮುಳುಗಿದ್ದಾರೆ. ಪೊಲೀಸರು ಅಪಘಾತ ನಡೆದ ಸ್ಥಳದ ಪರಿಶೀಲನೆ ನಡೆಸಿ, ಘಟನೆಗೆ ಕಾರಣವೇನು ಎಂಬುದರ ಕುರಿತು ತನಿಖೆ ಮುಂದುವರಿಸಿದ್ದಾರೆ.

## ಬೆಂಗಳೂರಿನಲ್ಲಿ ಮಕ್ಕಳಿಗೆ ಹೆಚ್ಚಿದ ವೈರಲ್ ಜ್ವರ, ಡೆಂಗ್ಯೂ ಆತಂಕ

● ವಿಕ್ರಮ ವಾಹಿನಿ | ಬೆಂಗಳೂರು

ನಗರದಲ್ಲಿ ಬದಲಾಗುತ್ತಿರುವ ಹವಾಮಾನ ಹಾಗೂ ನಿರಂತರ ಮಳೆಯ ಪರಿಣಾಮ ಮಕ್ಕಳಲ್ಲಿ ವೈರಲ್ ಜ್ವರ, ಡೆಂಗ್ಯೂ, ಶೀತ, ಕೆಮ್ಮು ಮತ್ತು ನೆಗಡಿಯಂತಹ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವುದು ಪೋಷಕರಲ್ಲಿ ಆತಂಕ ಮೂಡಿಸಿದೆ. ಮಳೆ ನೀರು ನಿಂತ ಪ್ರದೇಶಗಳಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಡೆಂಗ್ಯೂ ಮತ್ತು ಚಿಕೂನ್‌ಗುನ್ಯಾ ಹರಡುವಿಕೆ ತಡೆಯಲು ಮುನ್ನೆಚ್ಚರಿಕೆ ವಹಿಸುವಂತೆ ತಜ್ಞರು ಸಲಹೆ ನೀಡಿದ್ದಾರೆ.

ಕಳೆದ ನಾಲ್ಕೈದು ದಿನಗಳಿಂದ ನಗರದಲ್ಲಿ ಸುರಿದ ಮಳೆಯಿಂದ ವಾತಾವರಣ ತಂಪಾಗಿದ್ದು, ಕೆಲವು ಪ್ರದೇಶಗಳಲ್ಲಿ ನೀರು ನಿಂತಿದೆ. ಮಳೆ ಕಡಿಮೆಯಾಗುತ್ತಿದ್ದಂತೆ ಮಕ್ಕಳ ಆರೋಗ್ಯದ ಬಗ್ಗೆ ಪೋಷಕರ ಕಾಳಜಿಯೂ ಹೆಚ್ಚಾಗಿದೆ. ಹವಾಮಾನದಲ್ಲಿನ ಏರುಪೇರು, ಸೊಳ್ಳೆಗಳ ಕಾಟ ಹಾಗೂ ಸೋಂಕು ಹರಡುವಿಕೆಗೆ ಅನುಕೂಲಕರ ಪರಿಸ್ಥಿತಿಗಳು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದು ಎಂದು ತಜ್ಞರು ಎಚ್ಚರಿಸಿದ್ದಾರೆ.




**ಶೀತ, ಕೆಮ್ಮು, ಜ್ವರದ ಸಮಸ್ಯೆ:** ಸಾಮಾನ್ಯವಾಗಿ ಅಕ್ಟೋಬರ್ ವೇಳೆಗೆ ಡೆಂಗ್ಯೂ ಪ್ರಕರಣಗಳು ಕಡಿಮೆಯಾಗುವ ನಿರೀಕ್ಷೆಯಿದ್ದರೂ, ಈ ಬಾರಿ ಪ್ರಕರಣಗಳು ಹೆಚ್ಚಾಗುತ್ತಿರುವುದು ಗಮನ ಸೆಳೆದಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

**ಮಕ್ಕಳ ಆರೋಗ್ಯದ ಬಗ್ಗೆ ಎಚ್ಚರಿಕೆ ಅಗತ್ಯ**

ಮಕ್ಕಳಿಗೆ ಸಾಕಷ್ಟು ದ್ರವಾಹಾರ ನೀಡುವುದು, ಕುಡಿಯಲು ಸುರಕ್ಷಿತ ನೀರು ಬಳಸುವುದು ಮತ್ತು ವೈಯಕ್ತಿಕ ಸ್ವಚ್ಛತೆ ಕಾಪಾಡುವುದು ಮುಖ್ಯ. ಸೊಳ್ಳೆಗಳಿಂದ ರಕ್ಷಿಸಿಕೊಳ್ಳಲು ಮೈ ಮುಚ್ಚುವ ಬಟ್ಟೆ ತೊಡಿಸುವುದು, ಸೊಳ್ಳೆ ಪರದೆ ಬಳಸುವುದು ಹಾಗೂ ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡುವುದು ಸಹಕಾರಿ. ಚಳಿ ಅಥವಾ ಮಳೆಯ ವಾತಾವರಣದಲ್ಲಿ ಮಕ್ಕಳನ್ನು ಹೊರಗೆ ಕರೆದೊಯ್ಯುವಾಗ ಸೂಕ್ತ ಮುನ್ನೆಚ್ಚರಿಕೆ ವಹಿಸಬೇಕು.

ಜ್ವರದ ಜತೆಗೆ ತೀವ್ರ ಹೊಟ್ಟೆನೋವು, ನಿರಂತರ ವಾಂತಿ, ರಕ್ತಸ್ರಾವ, ಅತಿಯಾದ ನಿಶ್ಶಕ್ತಿ ಅಥವಾ ಉಸಿರಾಟದ ತೊಂದರೆ ಕಾಣಿಸಿಕೊಂಡರೆ ತಕ್ಷಣ ವೈದ್ಯಕೀಯ ನೆರವು ಪಡೆಯಬೇಕು. ಮಕ್ಕಳಿಗೆ ಸ್ವಯಂ ಔಷಧಿ ನೀಡುವ ಬದಲು ವೈದ್ಯರ ಸಲಹೆ ಪಡೆಯುವುದು ಸೂಕ್ತ.

ಒಟ್ಟಿನಲ್ಲಿ, ಬೆಂಗಳೂರಿನಲ್ಲಿ ಬದಲಾಗುತ್ತಿರುವ ಹವಾಮಾನದ ಹಿನ್ನೆಲೆಯಲ್ಲಿ ಮಕ್ಕಳ ಆರೋಗ್ಯದ ಬಗ್ಗೆ ಪೋಷಕರು ಎಚ್ಚರಿಕೆ ವಹಿಸುವುದು ಅಗತ್ಯವಾಗಿದೆ.

ಆತಂಕಕ್ಕೆ ಒಳಗಾಗದೆ, ಸ್ವಚ್ಛತೆ, ಸೊಳ್ಳೆ ನಿಯಂತ್ರಣ ಮತ್ತು ಸೂಕ್ತ ಸಮಯದಲ್ಲಿ ವೈದ್ಯಕೀಯ ಆರೈಕೆಗೆ ಆದ್ಯತೆ ನೀಡುವ ಮೂಲಕ ಸೋಂಕಿನ ಅಪಾಯವನ್ನು ಕಡಿಮೆ ಮಾಡಬಹುದು.

## ಸಾಲ ಮನ್ನಾಕ್ಕೆ ಆಗ್ರಹಿಸಿ 12 ಸಾವಿರ ರೈತರ ಮೆರವಣಿಗೆ

● ವಿಕ್ರಮ ವಾಹಿನಿ | ಮುಂಬೈ

ಕೃಷಿ ಸಾಲ ಸಂಪೂರ್ಣ ಮನ್ನಾ, ಬರ ಪರಿಹಾರ ಬಿಡುಗಡೆ ಹಾಗೂ ಬೆಳೆ ಹಾನಿಗೆ ಪರಿಹಾರ ನೀಡುವಂತೆ ಆಗ್ರಹಿಸಿ ಮಹಾರಾಷ್ಟ್ರದಲ್ಲಿ 12 ಸಾವಿರಕ್ಕೂ ಹೆಚ್ಚು ರೈತರು ಮತ್ತು ಕೃಷಿ ಕಾರ್ಮಿಕರು ಮುಖ್ಯಮಂತ್ರಿ ನಿವಾಸದತ್ತ ಪ್ರತಿಭಟನಾ ಮೆರವಣಿಗೆ ನಡೆಸಿದ್ದಾರೆ.

ಅಖಿಲ ಭಾರತ ಕಿಸಾನ್ ಸಭಾ ಸೇರಿದಂತೆ ವಿವಿಧ ರೈತ ಸಂಘಟನೆಗಳ ನೇತೃತ್ವದಲ್ಲಿ ನಡೆದ ಮೆರವಣಿಗೆಯಲ್ಲಿ ರೈತರು ಕೆಂಪು ಬಾವುಟ ಹಿಡಿದು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಸಾಲ ಮನ್ನಾ, ಬೆಳೆ ವಿಮೆ ಹಣ ತಕ್ಷಣ ಬಿಡುಗಡೆ, ಉತ್ಪಾದನಾ ವೆಚ್ಚದ ಮೇಲೆ ಶೇ. 50ರಷ್ಟು ಹೆಚ್ಚುವರಿ ಕನಿಷ್ಠ ಬೆಂಬಲ ಬೆಲೆ, ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಹಾಗೂ ಬುಡಕಟ್ಟು ರೈತರಿಗೆ ಅರಣ್ಯ ಭೂಮಿಯ ಹಕ್ಕುಪತ್ರ ನೀಡುವಂತೆ ಒತ್ತಾಯಿಸಿದರು. ರೈತರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದ್ದಾರೆ.

## ನಾರ್ತ್ ಬ್ಲಾಕ್‌ನಲ್ಲಿ ಅಗ್ನಿ ಅವಘಡ: ದಟ್ಟ ಹೊಗೆ

● ವಿಕ್ರಮ ವಾಹಿನಿ | ನವದೆಹಲಿ

ದೆಹಲಿಯ ನಾರ್ತ್ ಬ್ಲಾಕ್‌ನಲ್ಲಿ ನವೀಕರಣ ಕಾಮಗಾರಿ ನಡೆಯುತ್ತಿದ್ದ ವೇಳೆ ಭಾನುವಾರ ಬೆಳಗ್ಗೆ ಅಗ್ನಿ ಅವಘಡ ಸಂಭವಿಸಿದೆ. ವೆಲ್ಡಿಂಗ್ ಕಾರ್ಯದ ವೇಳೆ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ವಿಷಯ ತಿಳಿದು ಆರು ಅಗ್ನಿಶಾಮಕ ವಾಹನಗಳು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿವೆ. ಘಟನೆಯಿಂದ ಯಾವುದೇ ಪ್ರಾಣಾಪಾಯ ಸಂಭವಿಸಿರುವ ಬಗ್ಗೆ ವರದಿಯಾಗಿಲ್ಲ.



ಸವದತ್ತಿಯ ಯಲ್ಲಮ್ಮನ ಗುಡ್ಡಕ್ಕೆ ಸಿಎಂ ಡಿ ಕೆ ಶಿವಕುಮಾರ್ ಅವರು ಸೋಮವಾರ ಭೇಟಿ ನೀಡಿ ತಾಯಿ ಶ್ರೀ ರೇಣುಕಾ ಯಲ್ಲಮ್ಮನ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಎಚ್ ಕೆ ಪಾಟೀಲ್, ಶಾಸಕರಾದ ಎನ್ ಎಚ್ ಕೋನರೆಡ್ಡಿ, ಅಶೋಕ್ ಪಟ್ಟಣ ಮತ್ತಿತರರು ಜೊತೆಗಿದ್ದರು.

## ಮಧ್ವ ಜಯಂತಿ ಸಂಭ್ರಮ: ಸಾಧಕರಿಗೆ 'ಮಧ್ವ ವಿಜಯ' ಹಾಗೂ 'ಹನುಮ ಮಧ್ವೇಶ' ಪ್ರಶಸ್ತಿ ಪ್ರದಾನ

### ವಿಶ್ವ ಮಧ್ವಮತ ವೆಲ್ಫೇರ್ ಫೌಂಡೇಶನ್ ವತಿಯಿಂದ ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಸಾಮಾಜಿಕ ಕ್ಷೇತ್ರದ ಸಾಧಕರಿಗೆ ಗೌರವ

● ವಿಕ್ರಮ ವಾಹಿನಿ | ಬೆಂಗಳೂರು

ಜಗದ್ಗುರು ಶ್ರೀ ಮಧ್ವಾಚಾರ್ಯರ ದ್ವೈತ ವೇದಾಂತ ತತ್ವದ ಪ್ರಚಾರ, ಮಾಧ್ವ ಸಮುದಾಯದ ಕ್ಷೇಮಾಭಿವೃದ್ಧಿ ಹಾಗೂ ಧಾರ್ಮಿಕ, ಆಧ್ಯಾತ್ಮಿಕ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗೌರವಿಸುವ ಉದ್ದೇಶದಿಂದ ವಿಶ್ವ ಮಧ್ವಮತ ವೆಲ್ಫೇರ್ ಫೌಂಡೇಶನ್ (ನೋಂ.) ವತಿಯಿಂದ ಬೆಂಗಳೂರಿನಲ್ಲಿ ಮಧ್ವ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮಧ್ವ ಜಯಂತಿಯ ಅಂಗವಾಗಿ ಬಸವನಗುಡಿಯ ಉತ್ತರಾದಿ ಮಠದಲ್ಲಿ ವಿವಿಧ ಭಜನಾ ಮಂಡಳಿಗಳ ಸಾಮೂಹಿಕ ಭಜನೆಯಿಂದ ಕಾರ್ಯಕ್ರಮ ಪ್ರಾರಂಭ

ನಂತರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಧಾರ್ಮಿಕ, ಆಧ್ಯಾತ್ಮಿಕ, ಸಾಹಿತ್ಯ, ವೈದ್ಯಕೀಯ, ಶಿಕ್ಷಣ, ಉದ್ಯಮ ಹಾಗೂ ಪತ್ರಿಕೋದ್ಯಮ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಗೌರವಿಸಲಾಯಿತು.

ಸಾಧಕರಿಗೆ ಪ್ರಶಸ್ತಿ ಪ್ರದಾನ: ಧಾರ್ಮಿಕ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಖ್ಯಾತ ವಾಗ್ಮಿ ವಿದ್ವಾನ್ ಪವಮಾನಾಚಾರ್ಯ ಕಲ್ಲಾಪುರ, ಖ್ಯಾತ ಜ್ಯೋತಿಷಿ ಡಾ. ಪ್ರಸನ್ನಾಚಾರ್ಯ ಕಟ್ಟಿ, ದಾಸ ಸಾಹಿತ್ಯ ಪ್ರಸಾರಕ ಪ್ರಮೋದಾಚಾರ್ಯ ಹನಮಸಾಗರ್, ಅನುಮಾನತೀರ್ಥ ಆಚಾರ್ಯರಿಗೆ 'ಮಧ್ವ ವಿಜಯ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅದೇ ರೀತಿ, ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಹೃದ್ರೋಗ ತಜ್ಞ ಡಾ. ವೇಣುಗೋಪಾಲ ರಾಮರಾವ್, ಉದ್ಯಮಿ ಬಿ.ಎಸ್. ವೇದವ್ಯಾಸ, ನರಗುಂದ ಶಿಕ್ಷಣ ಸಂಸ್ಥೆಯ ನಿರ್ದೇಶಕ ಡಾ. ಶಚೀಂದ್ರ ಎಲ್. ನರಗುಂದ ಹಾಗೂ ಹಿರಿಯ ಪತ್ರಕರ್ತ ಮತ್ತು 'ಕೋಲಾರ ವಾಣಿ' ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಸಂಪಾದಕ ಬಿ.ಎನ್. ಮುರಳಿಪ್ರಸಾದ್ ಅವರಿಗೆ 'ಹನುಮ ಮಧ್ವೇಶ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷ ವೆಂಕೋಬ ರಾವ್ ಬುಕ್ಕಸಾಗರ, ಅಧ್ಯಕ್ಷ ಶ್ರೀನಿವಾಸ ಜೋಶಿ, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಜೋಯಿಸ್ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಜಯತೀರ್ಥ ವಿದ್ಯಾಪೀಠದ ಪ್ರಾಂಶುಪಾಲ ಡಾ. ಸತ್ಯಧ್ಯಾನಾಚಾರ್ಯ ಕಟ್ಟಿ, ಲೆಕ್ಕಪರಿಶೋಧಕ ಸಿ.ಎ. ಮುರಳಿ, ಶ್ರೀರಾಮ ಸೇನೆಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಹಾಗೂ ಸಂಸ್ಕೃತಿ ಚಿಂತಕ, ಪ್ರಣವ ಮೀಡಿಯಾ ಹೌಸ್ ಪ್ರಕಾಶನದ ಕಾರ್ಯನಿರ್ವಾಹಕ ಡಾ. ಗುರುರಾಜ ಪೋಶೆಟ್ಟಿಹಳ್ಳಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದರು. ಫೌಂಡೇಶನ್‌ನ ಕರ್ನಾಟಕ ರಾಜ್ಯಾಧ್ಯಕ್ಷ ಕೃಷ್ಣ ಎ.ಪಿ. ಅಧ್ಯಕ್ಷತೆ ವಹಿಸಿದ್ದರು.



### ಶ್ರೀ ಮಧ್ವಾಚಾರ್ಯರ ಜಯಂತಿ ಆಚರಣೆಯಿಂದ ಸರ್ಕಾರಕ್ಕೆ ಹಿರಿಮೆ: ಡಾ. ಸತ್ಯಧ್ಯಾನಾಚಾರ್ಯ ಕಟ್ಟಿ

● ವಿಕ್ರಮ ವಾಹಿನಿ | ಬೆಂಗಳೂರು

ಶ್ರೀ ಮಧ್ವಾಚಾರ್ಯರ ದಿನಾಚರಣೆಯನ್ನು ಸರ್ಕಾರದ ವತಿಯಿಂದ ಆಚರಿಸುತ್ತಿರುವ ನಿರ್ಧಾರಕ್ಕೆ ಹರ್ಷ ವ್ಯಕ್ತಪಡಿಸಿದ ಜಯತೀರ್ಥ ವಿದ್ಯಾಪೀಠದ ಪ್ರಾಂಶುಪಾಲ ಡಾ. ಸತ್ಯಧ್ಯಾನಾಚಾರ್ಯ ಕಟ್ಟಿ ಅವರು, ಶ್ರೀ ಮಧ್ವಾಚಾರ್ಯರ ಆಚರಣೆಯಿಂದ ಸರ್ಕಾರದ ಹಿರಿಮೆ ಹೆಚ್ಚಿದೆ ಎಂದು ಅಭಿಪ್ರಾಯಿಸಿದರು.



ನಗರದ ಬಸವನಗುಡಿಯ ಉತ್ತರಾಧಿ ಮಠದಲ್ಲಿ ಶ್ರೀ ವಿಶ್ವ ಮಧ್ವಮತ ವೆಲ್ಫೇರ್ ಫೌಂಡೇಶನ್ ಆಯೋಜಿಸಿದ್ದ 5ನೇ ವರ್ಷದ ಶ್ರೀ ಮಧ್ವ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, "ಗಂಗೆಯಲ್ಲಿ ಮನುಜರು ಮಿಂದೆದ್ದರೆ ಜನ್ಮ ಪಾವನಾಗುತ್ತದೆ. ಆದರೆ, ಶ್ರೀ ಮಧ್ವಾಚಾರ್ಯರು ಗಂಗೆಯಲ್ಲಿ ಮಿಂದೆದ್ದರೆ ಗಂಗೆಯೇ ಪಾವನಾಗುತ್ತದೆ" ಎಂದು ಮಧ್ವಾಚಾರ್ಯರ ಹಿರಿಮೆಯನ್ನು ಸಾರಿ ಹೇಳಿದರು.

ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸುವ ಆದೇಶದ ಹಿಂದಿನ ಶಕ್ತಿಯಾಗಿರುವ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವಿಜಯ್ ಮುಳಗುಂದ್ ಅವರ ಯಶಸ್ವಿ ಪ್ರಯತ್ನದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಕಟ್ಟಿ ಅವರು, ಮುಂದಿನ ದಿನಗಳಲ್ಲಿ ಅವರಿಂದ ಇನ್ನಷ್ಟು ಧರ್ಮ ಕಾರ್ಯಗಳು ಆಗಲಿ ಎಂದು ಹಾರೈಸಿದರು.

ಶ್ರೀ ಮಧ್ವಾಚಾರ್ಯರ ದ್ವೈತ ಸಿದ್ಧಾಂತದ ಪ್ರಚಾರದ ಜತೆಗೆ ಮಾಧ್ವ ಸಮುದಾಯದ ಕ್ಷೇಮಾಭಿವೃದ್ಧಿ, ವಿವಿಧ ಸಂಘ–ಸಂಸ್ಥೆಗಳ ನಡುವೆ ಸಹಕಾರ ಹಾಗೂ ಪರಸ್ಪರ ವಿಶ್ವಾಸ ವೃದ್ಧಿಸುವುದು ಫೌಂಡೇಶನ್‌ನ ಪ್ರಮುಖ ಉದ್ದೇಶವಾಗಿದೆ. ಸಮಾಜದ ದುರ್ಬಲ ವರ್ಗದವರಿಗೆ ನೆರವು ನೀಡುವುದು, ಸಾಮುದಾಯಿಕ ಸಾಮರಸ್ಯವನ್ನು ಬೆಳೆಸುವುದು ಮತ್ತು ಸೇವಾ ಮನೋಭಾವವನ್ನು ಉತ್ತೇಜಿಸುವ ಕಾರ್ಯಗಳಿಗೂ ಸಂಸ್ಥೆ ಆದ್ಯತೆ ನೀಡುತ್ತಿದೆ.

ಮಧ್ವ ಜಯಂತಿಯ ಸಂದರ್ಭದಲ್ಲಿ ವ್ಯಾಸ ಸಾಹಿತ್ಯ ಮತ್ತು ದಾಸ ಸಾಹಿತ್ಯ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದವರನ್ನು ಗೌರವಿಸುವುದರ ಜತೆಗೆ ವಿದ್ಯಾಪೀಠಗಳಲ್ಲಿ ಅಧ್ಯಯನ ಮಾಡುತ್ತಿರುವ ಆಯ್ದ ವಿದ್ಯಾರ್ಥಿಗಳಿಗೆ 'ವೇದವ್ಯಾಸ ಗೌರವ ಪುರಸ್ಕಾರ' ನೀಡಿ ಪ್ರೋತ್ಸಾಹಿಸಲಾಗುತ್ತದೆ.

ಮಠಗಳಲ್ಲಿ ಪೂಜೆ, ಅಡುಗೆ ಸೇರಿದಂತೆ ವಿವಿಧ ಸೇವೆಗಳನ್ನು ಸಲ್ಲಿಸುವವರನ್ನೂ ಗುರುತಿಸಿ ಗೌರವಿಸುವ ಮೂಲಕ ಧಾರ್ಮಿಕ ಪರಂಪರೆಯ ಸಂರಕ್ಷಣೆ ಮತ್ತು ಸೇವಾ ಮನೋಭಾವಕ್ಕೆ ಉತ್ತೇಜನ ನೀಡಲಾಗುತ್ತಿದೆ.

ಚೈತ್ರ ಮಾಸದ ಹನುಮ ಜಯಂತಿಯಂದು ಹನುಮ–ಮಧ್ವ ಪ್ರಶಸ್ತಿ, ಆಶ್ವಯುಜ ಮಾಸದ ಮಧ್ವ ಜಯಂತಿಯಂದು ಮಧ್ವ ವಿಜಯ ಪ್ರಶಸ್ತಿ, ಮಾಘ ಮಾಸದ ಮಧ್ವ ನವಮಿಯಂದು ಅರ್ಚಕರಿಗೆ ಮಧ್ವೇಶಾನುಗ್ರಹ ಗೌರವ ಹಾಗೂ ಪ್ರಶಸ್ತಿ ಮತ್ತು ಭೀಮಸೇನ ದೇವರ ಜಯಂತಿಯಂದು ಪಾಕಶಾಸ್ತ್ರ ಸೇವಕರಿಗೆ ಭೀಮ ಮಧ್ವೇಶ ಗೌರವ ಹಾಗೂ ಪ್ರಶಸ್ತಿ ಪ್ರದಾನ ಮಾಡುವ ಮೂಲಕ ವಿವಿಧ ಕ್ಷೇತ್ರಗಳ ಸೇವಾ ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ಸಂಸ್ಥೆ ನಿರಂತರವಾಗಿ ನಡೆಸಿಕೊಂಡು ಬರುತ್ತಿದೆ.

### ಶ್ರೀಮಧ್ವಾಚಾರ್ಯರ ಜಯಂತಿ ಆಚರಣೆಗೆ ಸರ್ಕಾರಗಳಿಗೆ 80 ವರ್ಷ ಬೇಕಾಯಿತೇ: ಮುತಾಲಿಕ್

● ವಿಕ್ರಮ ವಾಹಿನಿ | ಬೆಂಗಳೂರು

ಈ ದೇಶವನ್ನು ಸಮೃದ್ಧಗೊಳಿಸಿರುವ ಸನಾತನ ಧರ್ಮ ಪರಂಪರೆಯನ್ನು ಸಮೃದ್ಧಗೊಳಿಸಿದ ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಆಚರಿಸಲು ನಮ್ಮ ಸರ್ಕಾರಗಳಿಗೆ 80 ವರ್ಷ ಬೇಕಾಯಿತೆಚೇ? ಎಂದು ಹಿಂದೂ ಫೈರ್ ಬ್ರಾಂಡ್ ನಾಯಕ ಮತ್ತು ಶ್ರೀರಾಮ ಸೇನೆ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಆಶ್ಚರ್ಯ ವ್ಯಕ್ತಪಡಿಸಿದರು.



ನಗರದ ಬಸವನಗುಡಿಯ ಉತ್ತರಾಧಿ ಮಠದಲ್ಲಿ ಶ್ರೀ ವಿಶ್ವ ಮಧ್ವಮತ ವೆಲ್ಫೇರ್ ಫೌಂಡೇಶನ್ ಆಯೋಜಿಸಿದ್ದ 5ನೇ ವರ್ಷದ ಶ್ರೀ ಮಧ್ವ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಶ್ರೀ ಮಧ್ವಾಚಾರ್ಯರಂತೆ ಎನ್ನೆಷ್ಟೋ ಸಾಧು– ಸಂತರ ಈ ಮಣ್ಣಿನ ಸೇವೆ ಮಾಡಿದ್ದಾರೆ. ಸನಾತನ ಧರ್ಮಕ್ಕೆ ಕೊಡುಗೆ ನೀಡಿದ್ದಾರೆ ಅವರುಗಳನ್ನೂ ಸಹ ಗುರ್ತಿಸಿ ಸರ್ಕಾರ ಜಯಂತಿಗಳನ್ನು ಆಚರಿಸಬೇಕು ಎಂದು ಒತ್ತಾಯಿಸಿದರು. ನಮಗೆ ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳಾದರೂ ಸಹ ಹಿಂದೂಗಳನ್ನು ನಿಂದಿಸುವ ಕೆಲಸ ನಡೆಯುತ್ತಲೇ ಇದೆ. ಮಾತೃ ದೇವೋಭವ, ಪಿತೃ ದೇವೋಭವ, ಅತಿಥಿ ದೇವೋಭವ ಎಂಬ ಸಂಸ್ಕಾರದೊಂದಿಗೆ ಬೆಳೆದು ಬಂದಿರುವ ಹಿಂದೂಗಳು ಯಾರಿಗೆ ತೊಂದರೆ ಮಾಡಿದ್ದಾರೆ? ಎಂದು ಪ್ರಶ್ನಿಸಿದ ಅವರು, ಹಿಂದೂ ಒಂದು" ಎಂಬ ಘೋಷ ಎಲ್ಲೆಡೆ ಮೊಳಗಬೇಕು ಎಂದರು.

ಲವ್ ಜೆಹಾದ್ ಎಂಬುದು ದೊಡ್ಡ ಪಿಡುಗಾಗಿ ಬೆಳೆದು ನಿಂತಿದೆ. ಇದು ದೇಶಕ್ಕೆ ಮಾರಕವಾಗಿದೆ ಎಂದು ನುಡಿದ ಮುತಾಲಿಕ್ ಅವರು, ಈ ಪಿಡುಗಿನ ತಡೆಗೆ ಶ್ರೀರಾಮ ಸೇನೆ ವತಿಯಿಂದ "ಸಹಾಯವಾಣಿ" ತೆರೆಯಲಾಗಿದೆ ಎಂದ ಅವರು, ಎಲ್ಲರೂ ತಮ್ಮ ಹೆಣ್ಣು ಮಕ್ಕಳ ಬಗ್ಗೆ ನಿಗಾವಹಿಸಿ ಅವರಿಗೆ ತಿಳಿ ಹೇಳಿ ಲವ್ ಜೆಹಾದ್ ಪಿಡುಗಿನಿಂದ ಅವರನ್ನು ರಕ್ಷಿಸುವಂತೆ ನೆರೆದಿದ್ದವರಲ್ಲಿ ಮನವಿ ಮಾಡಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 198,